# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 88 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಚಿತ್ರದುರ್ಗ | ದಿನಾಂಕ: 21–10–2024 ಸೋಮವಾರ | ಪುಟ: 4 | ಬೆಲೆ : ರೂ.2–00
Volume - 02 Issue - 88 | RNI No: KARKAN/2023/88462 | Chitradurga | Date: 21-10-2024 Monday | Page: 4 | Price: Rs. 2-00



ಒಳಪುಟದ ಸುದ್ದಿಗಳು
69ನೇ ರಾಜ್ಯೋತ್ಸವ: ಕ್ರೀಡಾಂಗಣದಲ್ಲಿ ಸಚಿವರಿಂದ ರಾಷ್ಟ್ರಧ್ವಜಾರೋಹಣ 2
ಚಳ್ಳಕೆರೆ ತಾಲ್ಲೂಕಿನಾದ್ಯಂತ ಚಿತ್ತಮಳೆಯ ಅವಾಂತರ 3
ಕಂಗುವಳ್ಳಿ ಆಯುರ್ವೇದ ಚಿಕಿತ್ಸಾಲಯಕ್ಕೆ ದೆಹಲಿಯ ಅಧಿಕಾರಿಗಳ ತಂಡ; ಪ್ರಶಂಸೆ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಮಳೆ ವರದಿ: ಜಿಲ್ಲೆಯಾದ್ಯಂತ 55 ಮನೆಗಳು ಭಾಗಶಃ ಹಾನಿ

**ಜಿಲ್ಲೆಯಲ್ಲಿ 7.8 ಮಿ.ಮೀ ಮಳೆ**



» **ಚಿತ್ರದುರ್ಗ**

ಶುಕ್ರವಾರ ರಾತ್ರಿ ಸುರಿದ ಮಳೆ ವಿವರದನ್ವಯ ಚಿತ್ರದುರ್ಗ ಜಿಲ್ಲೆಯಲ್ಲಿ ಸರಾಸರಿ 7.8 ಮಿ.ಮೀ ಮಳೆಯಾಗಿದೆ.ಜಿಲ್ಲೆಯ ಚಳ್ಳಕೆರೆ ತಾಲ್ಲೂಕಿನಲ್ಲಿ 16 ಮಿ.ಮೀ,ಚಿತ್ರದುರ್ಗ ತಾಲ್ಲೂಕಿನಲ್ಲಿ 9.3 ಹಿರಿಯೂರು ತಾಲ್ಲೂಕು 8.3 ಮಿ.ಮೀ, ಹೊಳಲ್ಕೆರೆ ತಾಲ್ಲೂಕು 1.2 ಮಿ.ಮೀ, ಹೊಸದುರ್ಗ ತಾಲ್ಲೂಕಿನಲ್ಲಿ 0.8 ಮಿ.ಮೀ ಹಾಗೂ ಮೊಳಕಾಲ್ಮುರು ತಾಲ್ಲೂಕಿನಲ್ಲಿ 4.2 ಮಿ.ಮೀ ಮಳೆಯಾಗಿದೆ. ಹೋಬಳಿವಾರು ಮಳೆ ವಿವರ: ಚಳ್ಳಕೆರೆ ತಾಲ್ಲೂಕಿನ ಚಳ್ಳಕೆರೆಯಲ್ಲಿ 7.8 ಮಿ.ಮೀ, ನಾಯಕನಹಟ್ಟಿ 51.7 ಮಿ.ಮೀ, ಪರಶುರಾಂಪುರ 3.1 ಮಿ.ಮೀ, ತಳಕು 10.4 ಮಿ.ಮೀ ಮಳೆಯಾಗಿದೆ. ಚಿತ್ರದುರ್ಗ ತಾಲ್ಲೂಕಿನ ಚಿತ್ರದುರ್ಗದಲ್ಲಿ 6.5 ಮಿ.ಮೀ, ಭರಮಸಾಗರ 10.2 ಮಿ.ಮೀ, ಹಿರೇಗುಂಟನೂರು 11.7 ಮಿ.ಮೀ, ತುರುವನೂರು 11.3 ಮಿ.ಮೀ ಮಳೆಯಾಗಿದೆ. ಹಿರಿಯೂರು ತಾಲ್ಲೂಕಿನ ಹಿರಿಯೂರು 4.4 ಮಿ.ಮೀ, ಐಮಂಗಲ 6.9 ಮಿ.ಮೀ, ಧರ್ಮಪುರ 14.3 ಮಿ.ಮೀ, ಜವನಗೊಂಡನಹಳ್ಳಿ 6.7 ಮಿ.ಮೀ ಮಳೆಯಾಗಿದೆ. ಹೊಳಲ್ಕೆರೆ ತಾಲ್ಲೂಕಿನ ಹೊಳಲ್ಕೆರೆಯಲ್ಲಿ 0.8 ಮಿ.ಮೀ, ಬಿ.ದುರ್ಗ 1.9 ಮಿ.ಮೀ, ರಾಮಗಿರಿ 0.3 ಮಿ.ಮೀ, ತಾಳ್ಯ 1.9 ಮಿ.ಮೀ ಮಳೆಯಾಗಿದೆ. ಹೊಸದುರ್ಗ ತಾಲ್ಲೂಕಿನ ಹೊಸದುರ್ಗದಲ್ಲಿ 0.8 ಮಿ.ಮೀ, ಮಾಡದಕೆರೆ 0.7 ಮಿ.ಮೀ, ಮತ್ತೋಡು 0.9 ಮಿ.ಮೀ, ಶ್ರೀರಾಂಪುರ 0.7 ಮಿ.ಮೀ ಮಳೆಯಾಗಿದೆ. ಮೊಳಕಾಲ್ಮುರು ತಾಲ್ಲೂಕಿನ ಮೊಳಕಾಲ್ಮೂರಿನಲ್ಲಿ 4.1 ಮಿ.ಮೀ ಹಾಗೂ ದೇವಸಮುದ್ರದಲ್ಲಿ 4.4 ಮಿ.ಮೀ ಮಳೆಯಾಗಿದೆ.55 ಮನೆಗಳು ಭಾಗಶಃ ಹಾನಿ: ಶುಕ್ರವಾರ ರಾತ್ರಿ ಸುರಿದ ಮಳೆಗೆ ಜಿಲ್ಲೆಯಾದ್ಯಂತ 55 ಮನೆಗಳು ಭಾಗಶಃ ಹಾನಿಯಾಗಿದ್ದು, 3 ಮನೆಗಳಿಗೆ ನೀರು ನುಗ್ಗಿರುವ ಪ್ರಕರಣ ವರದಿಯಾಗಿದೆ. ಚಿತ್ರದುರ್ಗ ತಾಲ್ಲೂಕಿನಲ್ಲಿ 16 ಮನೆಗಳು ಭಾಗಶಃ ಹಾನಿ, ಚಳ್ಳಕೆರೆ 10 ಮನೆಗಳು, ಹೊಳಲ್ಕೆರೆ 8 ಮನೆಗಳು, ಹೊಸದುರ್ಗ 4 ಮನೆಗಳು ಭಾಗಶಃ ಹಾನಿ ಹಾಗೂ 3 ಮನೆಗಳಿಗೆ ನೀರು ನುಗ್ಗಿವೆ. ಹಿರಿಯೂರು ತಾಲ್ಲೂಕಿನಲ್ಲಿ 15 ಮನೆಗಳು ಭಾಗಶಃ ಹಾನಿ ಹಾಗೂ ಮೊಳಕಾಲ್ಮುರು ತಾಲ್ಲೂಕಿನಲ್ಲಿ 2 ಮನೆಗಳು ಭಾಗಶಃ ಹಾನಿಯಾಗಿವೆ ಎಂದು ಜಿಲ್ಲಾಧಿಕಾರಿಗಳ ಕಚೇರಿ ಪ್ರಕಟಣೆ ತಿಳಿಸಿದೆ.

### ಲೋಕಾ ಅಧಿಕಾರಿಗಳಿಂದ ಅಹವಾಲು ಸ್ವೀಕಾರ

» **ಚಿತ್ರದುರ್ಗ**

ಕರ್ನಾಟಕ ಲೋಕಾಯುಕ್ತ, ಚಿತ್ರದುರ್ಗ ವಿಭಾಗದ ಅಧಿಕಾರಿಗಳು ವಿವಿಧ ತಾಲ್ಲೂಕುಗಳಿಗೆ ಭೇಟಿ ನೀಡಿ, ಸಾರ್ವಜನಿಕರಿಂದ ಅಹವಾಲುಗಳನ್ನು ಸ್ವೀಕರಿಸಲಿದ್ದಾರೆ. ಅ. 22 ರಂದು ಲೋಕಾಯುಕ್ತ ಪೊಲೀಸ್ ನಿರೀಕ್ಷಕರು, ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 01.30 ರವರೆಗೆ ಹೊಸದುರ್ಗ ತಾಲ್ಲೂಕು ಕಚೇರಿಯಲ್ಲಿ. ಮಧ್ಯಾಹ್ನ 2.30 ರಿಂದ ಸಂಜೆ 5.30 ರವರೆಗೆ ಹೊಳಲ್ಕೆರೆ ತಾಲ್ಲೂಕು ಕಚೇರಿಯಲ್ಲಿ ಉಪಸ್ಥಿತರಿದ್ದು, ಅಹವಾಲುಗಳನ್ನು ಸ್ವೀಕರಿಸುವರು. ಅ. 23 ರಂದು ಪೊಲೀಸ್ ನಿರೀಕ್ಷಕರು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 01.30 ರವರೆಗೆ ಹಿರಿಯೂರು ತಾಲ್ಲೂಕು ಕಚೇರಿಯಲ್ಲಿ. ಪೊಲೀಸ್ ಉಪಾಧೀಕ್ಷಕರು ಮಧ್ಯಾಹ್ನ 2.30 ರಿಂದ ಸಂಜೆ 5.30 ರವರೆಗೆ ಚಿತ್ರದುರ್ಗ ತಾಲ್ಲೂಕು ಕಚೇರಿಯಲ್ಲಿ ಉಪಸ್ಥಿತರಿದ್ದು, ಅಹವಾಲುಗಳನ್ನು ಸ್ವೀಕರಿಸುವರು. ಅ. 24 ರಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 01.30 ರವರೆಗೆ ಮೊಳಕಾಲ್ಮೂರು ತಾಲ್ಲೂಕು ಕಚೇರಿಯಲ್ಲಿ. ಮಧ್ಯಾಹ್ನ 2.30 ರಿಂದ ಸಂಜೆ 5.30 ರವರೆಗೆ ಚಳ್ಳಕೆರೆ ತಾಲ್ಲೂಕು ಕಚೇರಿಯಲ್ಲಿ ಉಪಸ್ಥಿತರಿದ್ದು, ಅಹವಾಲುಗಳನ್ನು ಸ್ವೀಕರಿಸುವರು. ಸರ್ಕಾರಿ ಕಚೇರಿಗಳಲ್ಲಿ ಕೆಲಸಗಳನ್ನು ಮಾಡಿಕೊಡಲು ಅಧಿಕಾರಿ, ಸಿಬ್ಬಂದಿ ಲಂಚದ ಹಣಕ್ಕಾಗಿ ಬೇಡಿಕೆ ಇಟ್ಟಲ್ಲಿ, ಅನಾವಶ್ಯಕ ವಿಳಂಬ, ಕರ್ತವ್ಯ ನಿರ್ವಹಣೆಯಲ್ಲಿ ನಿರ್ಲಕ್ಷ್ಯ ಇತ್ಯಾದಿ ವಿಷಯಗಳ ದೂರುಗಳಿಗೆ ಸಂಬಂಧಿಸಿದಂತೆ ದೂರುಗಳನ್ನು ನಿಗದಿತ ನಮೂನೆ–1 ಮತ್ತು 2 ರಲ್ಲಿ ಸಲ್ಲಿಸಬಹುದಾಗಿದೆ ಎಂದು ಲೋಕಾಯುಕ್ತ ಚಿತ್ರದುರ್ಗ ವಿಭಾಗದ ಪೊಲೀಸ್ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಹಿನ್ನೀರಿನ ಕೆಲ ಗ್ರಾಮಗಳ ಜನರಲ್ಲಿ ಹೆಚ್ಚಿದ ಆತಂಕ

# ವಿವಿಎಸ್ ಕೋಡಿ ಬೀಳುವ ಮುನ್ಸೂಚನೆ

» **ವಿಶೇಷ ವರದಿ:**
**ಪಿ.ಟಿ.ಸಿದ್ದೇಶ್ ಲಕ್ಕಿಹಳ್ಳಿ**

» **ಹೊಸದುರ್ಗ**



ನಮ್ಮ ಜನ ವಿಶೇಷ

ಮಧ್ಯ ಕರ್ನಾಟಕದ ಜಲಪಾತ್ರೆ ಎಂದೇ ಖ್ಯಾತಿ ಪಡೆದಿರುವ ಚಿತ್ರದುರ್ಗ ಜಿಲ್ಲೆಯ ವಾಣಿವಿಲಾಸ ಸಾಗರ ಜಲಾಶಯದ ನೀರಿನ ಮಟ್ಟ ಪ್ರಸ್ತುತ ವರ್ಷದಲ್ಲಿ 123 ಅಡಿಗೆ ತಲುಪಿದೆ. ಡ್ಯಾಂ 3ನೇ ಬಾರಿಗೆ ಕೋಡಿಬೀಳುವ ಎಲ್ಲಾ ಸಾಧ್ಯತೆಗಳಿದ್ದು, ಜಲಾಶಯದ ಹಿನ್ನೀರಿನ ಹೊಸದುರ್ಗ ತಾಲೂಕಿನ ಕೆಲ ಗ್ರಾಮಗಳ ಜನರಲ್ಲಿ ಈಗಾಗಲೇ ಆತಂಕ ಶುರುವಾಗಿದೆ.

2022ರ ಸೆಪ್ಟೆಂಬರ್ ತಿಂಗಳಿನಲ್ಲಿ ಜಲಾಶಯ ಭರ್ತಿಯಾಗಿ 2 ನೇ ಬಾರಿಗೆ ಕೋಡಿ ಬಿದ್ದು ಮೈದುಂಬಿ ನಿರಂತರವಾಗಿ ಎರಡು ತಿಂಗಳುಗಳ ಕಾಲ ಹರಿದಿತ್ತು. 89 ವರ್ಷಗಳ ಬಳಿಕ ಡ್ಯಾಮ್ ಕೋಡಿ ಬಿದ್ದ ಸಂತೋಷ ಒಂದು ಕಡೆಯಾದರೆ, ಹಿನ್ನೀರಿನ ಗ್ರಾಮಗಳ ಜನರು ಸಂಕಟ ಪಡುವಂತಹ ಪರಿಸ್ಥಿತಿ ನಿರ್ಮಾಣವಾಗಿತ್ತು. ಮಾಡದಕೆರೆ ಹೋಬಳಿಯ ಪೂಜಾರಹಟ್ಟಿ ಗ್ರಾಮಕ್ಕೆ ನೀರು ನುಗ್ಗಿ ಬಹಳಷ್ಟು ಮನೆಗಳು ಜಲಾಶಯದ ಹಿನ್ನೀರಿನಲ್ಲಿ ಮುಳುಗಿ, ಜನರು ಮನೆ ತೊರೆದು ಊರ ಹೊರಗೆ ಗುಡಿಸಲು ಕಟ್ಟಿಕೊಂಡು ವಾಸವಾಗಿದ್ದರು. ಇನ್ನೂ ಮತ್ತೋಡು ಹೋಬಳಿಯ ನಾಗತಿಹಳ್ಳಿ, ಹಿಂಡೇ ದೇವರಹಟ್ಟಿ, ಅರೇಹಳ್ಳಿ ಮತ್ತು ಇನ್ನಿತರ ಗ್ರಾಮಗಳಲ್ಲಿ ತೇವಾಂಶದಿಂದಾಗಿ ಬಹಳಷ್ಟು ಮನೆಗಳ ಗೋಡೆಗಳು ಬಿರುಕು ಬಿಟ್ಟಿದ್ದವು. ಇದರಿಂದಾಗಿ ಗ್ರಾಮಗಳ ಜನರು ಜೀವ ಹಿಡಿದುಕೊಂಡೆ ಜೀವನ ದೂಡುವಂತಹ ದುಸ್ಥಿತಿ ನಿರ್ಮಾಣವಾಗಿತ್ತು.

ಚಿತ್ರದುರ್ಗ ಜಿಲ್ಲೆಯ ಹೊಸದುರ್ಗ ತಾಲೂಕು, ಚಿಕ್ಕಮಗಳೂರು ಜಿಲ್ಲೆಯ ಹಲವೆಡೆ ಈ ವರ್ಷವೂ ಕೂಡ ಆಗಾಗ್ಗೆ ಸುರಿಯುತ್ತಿರುವ ಮಳೆಯಿಂದಾಗಿ ಜಲಾಶಯದಲ್ಲಿನ ನೀರಿನ ಮಟ್ಟ 123 ಅಡಿಗೆ ಬಂದು ತಲುಪಿದೆ. ಈಗಾಗಲೇ, ನೀರು ಕೋಡಿ ಬಾಯಿಗೆ ಬಂದು ನಿಂತಿದ್ದು, ಇನ್ನೂ 7 ಅಡಿಗೆ ನೀರು ಸಂಗ್ರಹವಾದರೆ ಜಲಾಶಯ ಕೋಡಿ ಬೀಳುವ ಸಾಧ್ಯತೆ ದಟ್ಟವಾಗಿದೆ. ಕೆಲ್ಲೋಡು ವೇದಾವತಿ ನದಿಯ ಮೂಲಕ ನೀರು ಹರಿದು ಬರುತ್ತಿದ್ದು, ಇನ್ನೇನು 2 ತಿಂಗಳ ಒಳಗಾಗಿಯೇ ಜಲಾಶಯ ಕೋಡಿ ಬೀಳುತ್ತದೆ. ಕಳೆದ ಬಾರಿ ಹಿನ್ನೀರಿನ ಸಮೀಪದ ಗ್ರಾಮಗಳ ಜನರು ಬಹಳಷ್ಟು ತೊಂದರೆ ಅನುಭವಿಸಿದ್ದರು. ಈ ಬಾರಿ ಯಾವುದೇ ರೀತಿ ತೊಂದರೆ ಆಗದಂತೆ ತಾಲೂಕು ಆಡಳಿತ ಮತ್ತು ಜಿಲ್ಲಾಡಳಿತ ಮುಂಜಾಗ್ರತ ಕ್ರಮವಹಿಸಬೇಕಾಗಿದೆ ಎಂದು ಸುತ್ತಮುತ್ತದ ಗ್ರಾಮಗಳ ಜನರ ಒತ್ತಾಯವಾಗಿದೆ.

> ಈಗಾಗಲೇ, ವಿವಿಸಾಗರ ಜಲಾಶಯದ ಸಮೀಪವಿರುವ ಹಿನ್ನೀರಿನ ಗ್ರಾಮಗಳಿಗೆ ಭೇಟಿ ನೀಡಿ ಜನರ ಸಮಸ್ಯೆಗಳನ್ನು ಮತ್ತು ಅಲ್ಲಿರುವ ಪರಿಸ್ಥಿತಿಯನ್ನು ಪರಿಶೀಲಿಸಲಾಗಿದೆ. ಜಲಾಶಯ ಕೋಡಿ ಬಿದ್ದರು, ಜನರಿಗೆ ಯಾವುದೇ ರೀತಿಯಾಗಿ ಸಮಸ್ಯೆ ಆಗದಂತೆ ಮುನ್ನೆಚ್ಚರಿಕೆ ಕ್ರಮ ವಹಿಸಲಾಗಿದೆ. ರಾಜಸ್ವ ನಿರೀಕ್ಷಕರು ಮತ್ತು ಗ್ರಾಮಾಡಳಿತ ಅಧಿಕಾರಿಗಳು ಗ್ರಾಮಗಳಿಗೆ ಭೇಟಿ ನೀಡಿ ಪರಿಸ್ಥಿತಿಯ ಬಗ್ಗೆ ಮಾಹಿತಿ ನೀಡುತ್ತಿದ್ದಾರೆ. ಜಲಾಶಯ ಭರ್ತಿಯಾಗುತ್ತಿರುವುದರಿಂದ ಹಿನ್ನೀರಿನ ಯಾವುದೇ ಗ್ರಾಮಗಳಿಗೆ ತೊಂದರೆಯಾಗದಂತೆ ನಿಗವಹಿಸಲಾಗಿದೆ.
>
> » **ತಿರುಪತಿ ಪಾಟೀಲ್ ತಹಸಿಲ್ದಾರ್, ಹೊಸದುರ್ಗ**

> ಊರಿನ ಸಮೀಪಕ್ಕೆ ಜಲಾಶಯದ ನೀರು ಬಂದಿದ್ದು, ಕೆಲ್ಲೋಡು ಬ್ಯಾರೇಜ್ ಹಾಗೂ ಇತರ ಕೆರೆಗಳಿಂದ ಹೀಗೆಯೇ ನೀರು ಹರಿದು ಬಂದರೆ, ಒಂದು ವಾರದ ಒಳಗಾಗಿಯೇ ಗ್ರಾಮಕ್ಕೆ ನೀರು ಬರಲಿವೆ. ಅಧಿಕಾರಿಗಳು ಗ್ರಾಮಕ್ಕೆ ಭೇಟಿ ನೀಡಿ ಪರಿಸ್ಥಿತಿಯ ಬಗ್ಗೆ ಮಾಹಿತಿ ಪಡೆದುಕೊಂಡು ತೆರಳಿದ್ದಾರೆ. ಗ್ರಾಮದ ಒಳಗಡೆ ನೀರು ನುಗ್ಗಿ ಸಂಕಟಪಟ್ಟ ಗ್ರಾಮದ ಜನರು ಈಗಾಗಲೇ, ಮುನ್ನೆಚ್ಚರಿಕೆಯಿಂದ ಗ್ರಾಮದ ಹೊರಗಡೆ ಗುಡಿಸಲುಗಳನ್ನು ಮತ್ತು ತಾತ್ಕಾಲಿಕವಾಗಿ ಮನೆಗಳನ್ನು ಕಟ್ಟಿಕೊಳ್ಳುತ್ತಿದ್ದಾರೆ.
>
> » **ದಾಸಪ್ಪ, ಪೂಜಾರಹಟ್ಟಿ ಗ್ರಾಮದ ನಿವಾಸಿ**

## ವಾಣಿ ವಿಲಾಸ ಜಲಾಶಯದ ಕೋಡಿ ತಗ್ಗಿಸುವ ಬಿಡಲ್ಲ

» **ಹಿರಿಯೂರು**



ವೋಟ್ ಬ್ಯಾಂಕ್ ರಾಜಕಾರಣಕ್ಕೋಸ್ಕರ ವಾಣಿ ವಿಲಾಸ ಜಲಾಶಯದ ಕೋಡಿ ತಗ್ಗಿಸುವ ಪ್ರಸ್ತಾವನೆಯನ್ನು ಯಾವುದೇ ಕಾರಣಕ್ಕೂ ಕಾರ್ಯಸಾಧುವಾಗಲು ಬಿಡುವುದಿಲ್ಲ ಎಂದು ಭದ್ರಾ ಮೇಲ್ದಂಡೆ ಅಚ್ಚುಕಟ್ಟುದಾರರ ಹಿತರಕ್ಷಣಾ ಸಮಿತಿ ಸದಸ್ಯ ಕಸವನಹಳ್ಳಿ ರಮೇಶ್ ತಿಳಿಸಿದರು.

ನಗರದ ಪ್ರವಾಸಿ ಮಂದಿರದಲ್ಲಿ ಶನಿವಾರ ನಡೆಸಿದ ಸಭೆಯಲ್ಲಿ ಮಾತನಾಡಿದ ಅವರು ಮೈಸೂರು ನಾಲ್ವಡಿ ಕೃಷ್ಣರಾಜ ಒಡೆಯರವರು ತಾಲೂಕಿನ ವಾಣಿವಿಲಾಸಪುರ ಬಳಿ ವೇದಾವತಿ ನದಿಗೆ ಅಡ್ಡಲಾಗಿ ವಿವಿ ಸಾಗರ ಡ್ಯಾಂ ನಿರ್ಮಾಣ ಮಾಡಿದ್ದಾರೆ. ಅಂದು ಜಲಾಶಯ ನಿರ್ಮಾಣ ಮಾಡಿದ ಹೆಚ್. ಡಿ. ರೈಸ್ ಅವರು ದೂರದೃಷ್ಟಿ ಇಟ್ಟುಕೊಂಡು ಡ್ಯಾಂ ಕಟ್ಟಿದ್ದಾರೆ. ಆದರೆ ಅವರ ದೂರದೃಷ್ಟಿ ಹಾಗೂ ವರದಿಯನ್ನು ಗ್ರಹಿಸದೆ, ಓದದೇ ವೋಟ್ ಬ್ಯಾಂಕ್ ರಾಜಕಾರಣಿಗಳು ಹಾಗೂ ಈಗಿನ ಆಧುನಿಕ ಇಂಜಿನಿಯರ್‌ಗಳು ಅಗಾಧ ಇತಿಹಾಸವಿರುವ ಕೋಡಿ ಮಟ್ಟ ಇಳಿಸಲು ಪ್ರಸ್ತಾವನೆ ಕಳಿಸಿರುವುದು ದುರಂತ ಎಂದರು.

ವಾಣಿ ವಿಲಾಸ ಜಲಾಶಯ ಜಿಲ್ಲೆಯ ಭವಿಷ್ಯದ ಪ್ರಶ್ನೆಯಾಗಿದೆ. ಈ ಪೀಳಿಗೆಗೆ ನಾವುಗಳೇ ಕೊನೆಯ ಕೊಂಡಿಯಾಗಿದ್ದು ತಾಲೂಕಿನ ಎಲ್ಲಾ ಸಂಘ ಸಂಸ್ಥೆಗಳು, ಸಂಘಟನೆಗಳು, ಚಿಂತಕರು, ರೈತರು, ಸಾರ್ವಜನಿಕರು ವಿವಿ ಸಾಗರ ಡ್ಯಾಂ ಉಳಿಸಲು ಮುಂದಾಗಬೇಕು ಎಂದು ಕರೆ ನೀಡಿದರು.

ಪುಟ 3

## ಹಿರಿಯ ನಾಗರೀಕರಿಗೆ ಗೌರವ ಕೊಡುವುದು ಎಲ್ಲರ ಕರ್ತವ್ಯ: ನ್ಯಾಯಾಧೀಶೆ ಎಚ್.ಆರ್.ಹೇಮಾ

» **ಚಳ್ಳಕೆರೆ**

ಹಿರಿಯರನ್ನು ಗೌರವಿಸುವ ಮೂಲಕ ಅವರ ಸೇವೆಯನ್ನು ಸದಾಸ್ಮರಿಸಬೇಕೆಂದು ಪ್ರಧಾನಸಿವಿಲ್ ನ್ಯಾಯಾಧೀಶೆ ಎಚ್.ಆರ್.ಹೇಮಾ ತಿಳಿಸಿದರು. ಅವರು, ನಗರದ ತಾಲೂಕು ಕಚೇರಿ ಸಭಾಂಗಣದಲ್ಲಿ ಹಿರಿಯ ನಾಗರೀಕರ ದಿನಾಚರಣೆ ಕಾರ್ಯಕ್ರಮವನ್ನು ಗಿಡಕ್ಕೆ ನೀರು ಎರೆಯುವ ಮೂಲಕ ಚಾಲನೆ ನೀಡಿ ಮಾತನಾಡಿದರು. ಪ್ರತಿಯೊಬ್ಬರೂ ತಮ್ಮ ಮನೆಯಲ್ಲಿ ಹಿರಿಯರಿಗೆ ಗೌರವ ಕೊಡಬೇಕು. ಯಾವ ವ್ಯಕ್ತಿ ಹಿರಿಯರಿಗೆ ಅಗೌರವ ಉಂಟು ಮಾಡುತ್ತಾನೋ ಅಂತಹ ವ್ಯಕ್ತಿಯನ್ನು ಎಲ್ಲರೂ ಸೇರಿ ದೂರವಿಡಬೇಕಾಗುತ್ತದೆ. ಹಿರಿಯ ನಾಗರೀಕರು ನಮ್ಮ ಸಮಾಜದ ಆಸ್ತಿ ಎಂದರು. ಕಂದಾಯ ಇಲಾಖೆಯಿಂದ ಗ್ರಾಮೀಣ ಭಾಗದ ಅನೇಕ ಹಿರಿಯರಿಗೆ ಮಂಜೂರಾದ ವಿಧಾನವೇತನ, ವೃದ್ಧಾಪ್ಯವೇತನ ಮುಂತಾದ ಯೋಜನೆಗಳ ಮಂಜೂರಾತಿ ಪತ್ರವನ್ನು ವಿತರಿಸಿದರು.

ಪುಟ 3

## ಪ್ರಮುಖ ಸುದ್ದಿ

### ಕ್ಷೇತ್ರದ ಮತದಾರರ ಋಣ ತೀರಿಸಲು ಪುತ್ರಿಯ ಅದ್ದೂರಿ ವಿವಾಹದೊಂದಿಗೆ ಮತದಾರರಿಗೆ ಶಾಸಕ ರಘುಮೂರ್ತಿ ಅಭಿನಂದನೆ

# ಜನರ ಆಶೀರ್ವಾದಕ್ಕೆ ಮಂಟಪ ಸಿದ್ದ: ಎಲ್ಲರೂ ಬನ್ನಿ ಶುಭಹಾರೈಸಿ

» **ಚಳ್ಳಕೆರೆ**



ಚಿತ್ರದುರ್ಗ ಜಿಲ್ಲೆಯ ಪರಿಶಿಷ್ಟ ಪಂಗಡಕ್ಕೆ ಮೀಸಲಾಗಿರುವ ಚಳ್ಳಕೆರೆ ವಿಧಾನಸಭಾ ಕ್ಷೇತ್ರದಿಂದ 2013, 2018 ಮತ್ತು 2023 ಮೂರು ಚುನಾವಣೆಗಳಲ್ಲಿ ಅತಿಹೆಚ್ಚಿನ ಮತಗಳ ಹಂತದಿಂದ ಜಯಭೇರಿ ಬಾರಿಸಿ ಹ್ಯಾಟ್ರಿಕ್ ವಿಜಯ ಸಾಧಿಸಿದ ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ತಮ್ಮನ್ನು ಮೂರು ಬಾರಿ ಆಯ್ಕೆ ಮಾಡಿದ ಕ್ಷೇತ್ರದ ಮತದಾರರ ವಿಶ್ವಾಸ, ಅಭಿಮಾನಕ್ಕೆ ಗೌರವ ನೀಡಿ ಮತದಾರರ ಋಣವನ್ನು ತೀರಿಸುವ ನಿಟ್ಟಿನಲ್ಲಿ ತಮ್ಮ ಏಕಮಾತ್ರ ಪುತ್ರಿ ಟಿ.ಆರ್.ಸುಚಿತ್ರ, ಜಿ.ವರುಣರವರ ವಿವಾಹವನ್ನು ನಗರದ ಎಚ್‌ಪಿಪಿಸಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸುಧಾಕರ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳುವ ಮೂಲಕ ಕ್ಷೇತ್ರದ ಮತದಾರರಿಗೆ ತಮ್ಮ ಅಭಿನಂದನಾ ಪೂರ್ವಕ ಕೃತಜ್ಞತೆಗಳನ್ನು ಸಲ್ಲಿಸುತ್ತಿದ್ದಾರೆ.

ಈಗಾಗಲೇ ಕಳೆದ ಸುಮಾರು ಒಂದುವಾರದಿಂದ ಕ್ರೀಡಾಂಗಣದಲ್ಲಿ ವೈಭವದ ಅದ್ದೂರಿ ವಿವಾಹಕ್ಕೆ ಸಿದ್ದತೆಗಳು ಭರದಿಂದ ಸಾಗಿದ್ದು, ವಿವಾಹದ ಕಲ್ಯಾಣಮಂಟಪದಲ್ಲೇ ಕಾರ್ಯಕರ್ತರು, ಪಕ್ಷದ ಅಭಿಮಾನಿಗಳ ಸಭೆಯಲ್ಲಿ ಮಾತನಾಡಿದ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ಧಿ ನಿಗಮದ ಅಧ್ಯಕ್ಷ ಟಿ.ರಘುಮೂರ್ತಿ, ಈ ಕ್ಷೇತ್ರದ ಜನ ನನಗೆ ಮೂರು ಬಾರಿ ವಿಜಯಶಾಲಿಯಾಗುವ ಅವಕಾಶವನ್ನು ದೊರಕಿಸಿಕೊಟ್ಟಿದ್ದಾರೆ. ಇದು ನನಗೆ ದೈವದ ಫಲವೆಂದು ಸ್ವೀಕರಿಸಿದ್ದೇನೆ. ಮತದಾರರ ವಿಶ್ವಾಸ, ಅಭಿಮಾನಕ್ಕೆ ಬೆಲೆಕಟ್ಟಲು ಸಾಧ್ಯವಿಲ್ಲ. ಮತದಾರರ ಎದುರೇ, ಸಮ್ಮುಖದಲ್ಲೇ ಅವರ ಆಶೀರ್ವಾದದಿಂದಲೇ ನನ್ನ ಪುತ್ರಿಯ ವಿವಾಹ ನಡೆಯಬೇಕೆಂಬ ಸಂಕಲ್ಪದಿಂದ ಇಲ್ಲಿಯೇ ವಿವಾಹ ಕಾರ್ಯ ಮಾಡುತ್ತಿದ್ದೇನೆ. ಕ್ಷೇತ್ರದ ಜನರನ್ನು ಈಗಾಗಲೇ ಆಹ್ವಾನಿಸಿದ್ದೇನೆ, ಎಲ್ಲಾ ಸಿದ್ದತೆ ನಡೆದಿವೆ. ಎಲ್ಲರೂ ಆಗಮಿಸಿ ವದುವರರನ್ನು ಆಶೀರ್ವದಿಸಿ ನಾವು ನೀಡುವ ಅತಿಥಿ ಸತ್ಕಾರವನ್ನು ಸ್ವೀಕರಿಸುವಂತೆ ಈ ಮೂಲಕ ಮನವಿ ಮಾಡುತ್ತಿದ್ದೇನೆಂದು ತಿಳಿಸಿದ್ದಾರೆ.

ಶಾಸಕ ಪುತ್ರಿ ವಿವಾಹ ಹಿನ್ನೆಲೆಯಲ್ಲಿ ಚಳ್ಳಕೆರೆನಗರದ ಚಿತ್ರದುರ್ಗ ರಸ್ತೆ ಜಗಮಗಿಸುವ ವಿದ್ಯುತ್ ದೀಪಗಳಿಂದ ಕಂಗೊಳಿಸುತ್ತಿದೆ. ನಗರದ ಎಲ್ಲಾ ವೃತ್ತಗಳಲ್ಲಿ ಮುಖ್ಯಮಂತ್ರಿ ಎಸ್.ಸಿದ್ದರಾಮಯ್ಯ ಸೇರಿದಂತೆ ಆಗಮಿಸುವ ಎಲ್ಲರಿಗೂ ಸ್ವಾಗತಕೋರುವ ಬ್ಯಾನರ್‌ಗಳು ರಾರಾಜಿಸುತ್ತವೆ. ತಾಲ್ಲೂಕು ಮಟ್ಟದ ಎಲ್ಲಾ ಅಧಿಕಾರಿಗಳು ಮುಖ್ಯಮಂತ್ರಿಗಳನ್ನು ಸ್ವಾಗತಿಸಲು ತಮ್ಮದೇಯಾದ ರೀತಿಯಲ್ಲಿ ವ್ಯವಸ್ಥೆ ಮಾಡಿಕೊಳ್ಳುತ್ತಿದ್ದಾರೆ. ಕ್ಷೇತ್ರದ ಜನರೂ ಸಹ ಶಾಸಕ ಪುತ್ರಿಯ ವಿವಾಹದಲ್ಲಿ ಪಾಲ್ಗೊಳ್ಳಲು ಉತ್ಸಾಹದಿಂದ ಇದ್ದಾರೆ.

ವಿವಾಹ ಕಾರ್ಯಕ್ಕೆ ಆಗಮಿಸುವ ಲಕ್ಷಾಂತರ ಜನರಿಗೆ ಭೋಜನವೂ ಸೇರಿದಂತೆ ಯಾವುದೇ ಅವ್ಯವಸ್ಥೆಯಾಗದಂತೆ ಪಕ್ಷದ ಕಾರ್ಯಕರ್ತರು, ಮುಖಂಡರು ಈಗಾಗಲೇ ಹಲವಾರು ರೂಪುರೇಷೆಗಳನ್ನು ಸಿದ್ದಪಡಿಸಿಕೊಂಡಿದ್ದಾರೆ. ಕ್ಷೇತ್ರದ ಪ್ರತಿಗ್ರಾಮದಿಂದಲೂ ವಿವಾಹ ಕಾರ್ಯಕ್ಕೆ ಆಗಮಿಸುವ ಬಸ್ ವ್ಯವಸ್ತೆ ಮಾಡಲಾಗಿದೆ. ಪ್ರತಿಗ್ರಾಮಕ್ಕೂ ವಿವಾಹದ ಆಹ್ವಾನದ ಪತ್ರಿಕೆಗಳನ್ನು ಕಳಿಸಿ ಎಲ್ಲರನ್ನೂ ಆಹ್ವಾನಿಸಿದೆ.

ವಿಶೇಷವಾದ ಬೃಹತ್ ಜರ್ಮನ್ ಟೆಂಟ್ ನಿರ್ಮಾಣ :– ವಿವಾಹ ನಡೆಯುವ ಮದುವೆ ಮಂಟಪವನ್ನು ಅದ್ದೂರಿಯಾಗಿ ಸಿದ್ದಪಡಿಸಲಾಗಿದೆ. ತಿರುಪತಿಯ ಶ್ರೀವೆಂಕಟೇಶ್ವರಸ್ವಾಮಿ ದೇವಾಲಯ ಹೋಲಿಕೆಯುಳ್ಳ ಆಕರ್ಷಣೆವಾದ ಮಂಟಪ ಸಿದ್ದಪಡಿಸಿದೆ. ಮಂಟಪದ ಒಳಭಾಗದಲ್ಲಿ ಮಾಂಗಲ್ಯಧಾರಣೆಯಾಗುವ ಸ್ಥಳವೂ ಸಹ ದೇವಸ್ಥಾನದ ಆಕಾರದಲ್ಲೇ ಸಿದ್ದವಾಗಿದೆ, ಮದುವೆ ಆಗಮಿಸುವ ವಿಐಪಿ, ವಿವಿಐಪಿಗಳು ನೇರವಾಗಿ ವಧುವರರನ್ನು ಆಶೀರ್ವದಿಸಿ ಮದುವೆ ಮಂಟಪದ ಹಿಂಭಾಗದಲ್ಲಿ ನಿರ್ಮಿಸಿರುವ ಊಟದ ಹಾಲ್‌ಗೆ ತೆರಳಬಹುದಾಗಿದೆ.

ಪುಟ 3

## ಫಾಸ್ಟ್ ನ್ಯೂಸ್

### ಅ.21ರಂದು ಪೊಲೀಸ್ ಹುತಾತ್ಮರ ದಿನಾಚರಣೆ

» ಚಿತ್ರದುರ್ಗ

ಚಿತ್ರದುರ್ಗ ಜಿಲ್ಲಾ ಪೊಲೀಸ್ ಇಲಾಖೆ ವತಿಯಿಂದ ಇದೇ ಅಕ್ಟೋಬರ್ 21ರಂದು ಬೆಳಿಗ್ಗೆ 8ಕ್ಕೆ ನಗರದ ಜಿಲ್ಲಾ ಸಶಸ್ತ್ರ ಮೀಸಲು ಪೊಲೀಸ್ ಪಡೆ ಆವರಣದಲ್ಲಿ "ಪೊಲೀಸ್ ಹುತಾತ್ಮರ ದಿನಾಚರಣೆ" ಹಮ್ಮಿಕೊಳ್ಳಲಾಗಿದೆ. ಮುಖ್ಯ ಅತಿಥಿಗಳಾಗಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಭಾಗವಹಿಸುವರು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್‌ಕುಮಾರ್ ಬಂಡಾರು ತಿಳಿಸಿದ್ದಾರೆ.

### ಪಾಲಿಕೆ ಸ್ಥಾಯಿ ಸಮಿತಿಗಳಿಗೆ ನವೆಂಬರ್ 8 ರಂದು ಚುನಾವಣೆ

» ದಾವಣಗೆರೆ

ಬೆಂಗಳೂರು ವಿಭಾಗದ ಪ್ರಾದೇಶಿಕ ಆಯುಕ್ತರಾದ ಅಮ್ಲಾನ್ ಆದಿತ್ಯ ಬಿಸ್ವಾಸ್ ಅವರ ಅಧ್ಯಕ್ಷತೆಯಲ್ಲಿ ಮಹಾನಗರಪಾಲಿಕೆಯ ನಾಲ್ಕು ಸ್ಥಾಯಿ ಸಮಿತಿಗಳ ಸದಸ್ಯರ ಸ್ಥಾನಗಳಿಗೆ ಚುನಾವಣೆ ನಡೆಸಲು ನವಂಬರ್ 8 ರಂದು ಮಧ್ಯಾಹ್ನ 3 ಗಂಟೆಗೆ ಪಾಲಿಕೆಯ ಸಭಾಂಗಣದಲ್ಲಿ ಚುನಾವಣಾ ಸಭೆಯನ್ನು ಆಯೋಜಿಸಲಾಗಿದೆ. ನ.8 ರಂದು ಮಧ್ಯಾಹ್ನ 12 ರಿಂದ 1 ಗಂಟೆಯವರೆಗೆ ನಾಮಪತ್ರ ಸ್ವೀಕರಿಸುವುದು. ಮಧ್ಯಾಹ್ನ 3 ಗಂಟೆಗೆ ಸಭೆ ಪ್ರಾರಂಭಿಸಿ ಹಾಜರಾತಿ ಪಡೆಯುವುದು. ನಂತರ ನಾಮಪತ್ರಗಳ ಪರಿಶೀಲನೆ, ಕ್ರಮಬದ್ಧ ನಾಮಪತ್ರಗಳ ಘೋಷಣೆ, ಚುನಾವಣೆ ಅಗತ್ಯವಿದ್ದಲ್ಲಿ ಮತಪತ್ರಗಳ ಮೂಲಕ ಮತದಾನ ಪ್ರಕ್ರಿಯೆ ನಡೆಸುವುದು, ಮತಗಳ ಎಣಿಕೆ ಹಾಗೂ ಫಲಿತಾಂಶ ಘೋಷಣೆ ಮಾಡಲಾಗುವುದೆಂದು ಅವರು ತಿಳಿಸಿದ್ದಾರೆ.

### ನಿಧಿ ಆಪ್ಕೆ ನಿಕಾಟ್ 2.0 ಕಾರ್ಯಕ್ರಮ

» ದಾವಣಗೆರೆ

ಪ್ರತಿ ಜಿಲ್ಲೆಯಲ್ಲಿ ಪ್ರತಿ ತಿಂಗಳ 27 ರಂದು ನಿಧಿ ಆಪ್ಕೆ ನಿಕಾಟ್ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತೆಯ ಅಗತ್ಯಗಳನ್ನು ಪೂರೈಸುವ ನೌಕರರ ಭವಿಷ್ಯ ನಿಧಿ ಸಂಸ್ಥೆ, ಜಿಲ್ಲೆಗಳಲ್ಲಿ ಹೆಜ್ಜೆ ಗುರುತು ಮತ್ತು ಉಪಸ್ಥಿತಿಯನ್ನು ಹೆಚ್ಚಿಸುವ ಉದ್ದೇಶದಿಂದ ಮತ್ತು ಕಾರ್ಮಿಕರಿಗೆ ಲಭ್ಯವಿರುವ ವಿವಿಧ ಪ್ರಯೋಜನಗಳ ಬಗ್ಗೆಅರಿವುಮೂಡಿಸುವುದುಇದರಉದ್ದೇಶವಾಗಿದೆ. ಇದು ಸದಸ್ಯರು ಮತ್ತು ಮಾಹಿತಿ ವಿನಿಮಯ, ಕುಂದುಕೊರತೆ ನಿವಾರಣಾ ವೇದಿಕೆಯಾಗಿ ಕಾರ್ಯನಿರ್ವಹಿಸುವ ಉದ್ಯೋಗದಾತರು ಮತ್ತು ಉದ್ಯೋಗಿಗಳಿಗೆ ಒಗ್ಗೂಡಿಸುವ, ವಿಶಾಲ ಆಧಾರಿತ ಭಾಗವಹಿಸುವಿಕೆಯ ಕಾರ್ಯಕ್ರಮವಾಗಿದೆ. ಅಂಬೇಡ್ಕರ್ ಪಂಪಣ್ಣ ಸಗಟು ಬಟ್ಟೆ ವ್ಯಾಪಾರಿಗಳು ಚೌಕಿಪೇಟೆ, ಕಾಳಿಕಾದೇವಿ ರಸ್ತೆ, ದಾವಣಗೆರೆ ಇಲ್ಲಿ ಅಕ್ಟೋಬರ್ 28 ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 1 ಗಂಟೆಯವರೆಗೆ ಉದ್ಯೋಗದಾತರು ಮತ್ತು ಉದ್ಯೋಗಿಗಳಿಗೆ, ಪಿಂಚಣಿದಾರರಿಗೆ ಮಧ್ಯಾಹ್ನ 2.30 ರಿಂದ 4 ಗಂಟೆಯವರೆಗೆ ಕಾರ್ಯಕ್ರಮವನ್ನು ನಡೆಸಲಾಗುವುದು ಎಂದು ಪ್ರಾದೇಶಿಕ ಭವಿಷ್ಯ ನಿಧಿ ಕಮೀಷನರ್ ತಿಳಿಸಿದ್ದಾರೆ.

### ಸಿರಿ ಶಿಕ್ಷಕ ಪ್ರಶಸ್ತಿಗೆ ಗಂಗಾ ಪದವಿಪೂರ್ವ ಕಾಲೇಜಿನ ಉಪನ್ಯಾಸಕ ಶಫಿಉಲ್ಲ ಆಯ್ಕೆ

» ಹಿರಿಯೂರು



ಚಿತ್ರದುರ್ಗ ಚಿನ್ಮೂಲಾದ್ರಿ ಸಾಹಿತ್ಯ ವೇದಿಕೆಯಿಂದ ಕೊಡಮಾಡುವ ಚಿನ್ಮೂಲಾದ್ರಿ ಸಿರಿ ಶಿಕ್ಷಕ ಪ್ರಶಸ್ತಿಗೆ ನಗರದ ಗಂಗಾ ಪದವಿಪೂರ್ವ ಕಾಲೇಜಿನ ಉಪನ್ಯಾಸಕ ಎಸ್ ಎಚ್ ಶಫಿ ಉಲ್ಲರವರು ಆಯ್ಕೆಯಾಗಿದ್ದಾರೆ. ಹದಿನೆಂಟು ವರ್ಷಗಳ ಬೋಧಕ ವೃತ್ತಿಯ ಅನುಭವದಲ್ಲಿ ಶಿಕ್ಷಣದ ವಿವಿಧ ಹಂತಗಳಲ್ಲಿ ಅರ್ಪಣಾ ಮನೋಭಾವದಿಂದ ಸೇವೆ ಸಲ್ಲಿಸುತ್ತಿರುವ ಇವರು ಬೋಧನೆಯ ಜೊತೆಗೆ ಸಾಹಿತ್ಯ, ಸಂಘಟನೆ ಮತ್ತು ರಂಗಭೂಮಿಯಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡಿದ್ದು ಬಹುಮುಖ ಪ್ರತಿಭೆಯಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಹಾಗಾಗಿ ಇವರನ್ನು ಪ್ರಶಸ್ತಿಗೆ ಆಯ್ಕೆಮಾಡಲಾಗಿದ್ದು ಇದೇ ತಿಂಗಳ ದಿನಾಂಕ 29 ರಂದು ಚಿತ್ರದುರ್ಗದಲ್ಲಿ ನಡೆಯುವ ವೇದಿಕೆಯ ವಾರ್ಷಿಕೋತ್ಸವ ಸಮಾರಂಭದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ವೇದಿಕೆಯ ಸಂಸ್ಥಾಪಕ ದಯಾ ಪುತ್ತೂರ್ಕರ್ ತಿಳಿಸಿದ್ದಾರೆ.

### ವಿದ್ಯುತ್ ವ್ಯತ್ಯಯ

» ದಾವಣಗೆರೆ

ಬಿದಿರಿಕೆರೆ 66/11 ವಿ.ವಿ.ಕೇಂದ್ರದಲ್ಲಿ ತುರ್ತು ಕಾಮಗಾರಿ ಹಮ್ಮಿಕೊಂಡಿರುವುದರಿಂದ ಅಕ್ಟೋಬರ್ 21 ರ ಸೋಮುವಾರ ಬೆಳಗ್ಗೆ 10 ರಿಂದ ಸಂಜೆ 5 ಗಂಟೆವರೆಗೆ ಬಿದರಿಕೆರೆ ವ್ಯಾಪ್ತಿಯ ಬರುವ ಎಲ್ಲಾ ಗ್ರಾಮಗಳ ಐ.ಪಿ. ಮಾರ್ಗಗಳಿಗೆ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂ ತಿಳಿಸಿದೆ.

# ನ.1ರಂದು 69ನೇ ರಾಜ್ಯೋತ್ಸವ: ಕ್ರೀಡಾಂಗಣದಲ್ಲಿ ಉಸ್ತುವಾರಿ ಸಚಿವರಿಂದ ರಾಷ್ಟ್ರಧ್ವಜಾರೋಹಣ

» ದಾವಣಗೆರೆ



ಜಿಲ್ಲಾಡಳಿತದಿಂದ ನವೆಂಬರ್ 1 ರಂದು ನಡೆಯುವ 69 ನೇ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮವನ್ನು ಜಿಲ್ಲಾ ಕ್ರೀಡಾಂಗಣದಲ್ಲಿ ಆಯೋಜಿಸಲಿದ್ದು ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್. ಮಲ್ಲಿಕಾರ್ಜುನ್ ರಾಷ್ಟ್ರಧ್ವಜಾರೋಹಣ ನೆರವೇರಿಸುವರು ಎಂದು ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ತಿಳಿಸಿದರು.

ಅವರುಜಿಲ್ಲಾಡಳಿತಭವನದತುಂಗಭದ್ರಾ ಸಭಾಂಗಣದಲ್ಲಿ ರಾಜ್ಯೋತ್ಸವ ಆಚರಣೆ ಪೂರ್ವಭಾವಿ ಸಿದ್ದತಾ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಕರ್ನಾಟಕ ರಾಜ್ಯೋತ್ಸವವನ್ನು ಅದ್ದೂರಿಯಾಗಿ ಆಚರಣೆ ಮಾಡಲಾಗುತ್ತಿದ್ದು ಹೈಸ್ಕೂಲ್ ಮೈದಾನದಿಂದ ವಿವಿಧ ಆಕರ್ಷಕ ಕಲಾತಂಡಗಳೊಂದಿಗೆ ಭುವನೇಶ್ವರಿ ದೇವಿ ಭಾವಚಿತ್ರದೊಂದಿಗೆ ಮೆರವಣಿಗೆ ಸಾಗಲಿದ್ದು ಜಿಲ್ಲಾ ಕ್ರೀಡಾಂಗಣಕ್ಕೆ ಆಗಮಿಸಲಿದೆ. ಮೆರವಣಿಗೆಯಲ್ಲಿ ಅಧಿಕಾರಿಗಳು, ಸಿಬ್ಬಂದಿಗಳು ಮತ್ತು ಕನ್ನಡಪರ ಸಂಘಟನೆಗಳ ಸಂಘ, ಸಂಸ್ಥೆಗಳ ಪ್ರತಿನಿಧಿಗಳು ಭಾಗವಹಿಸಬೇಕು ಎಂದರು.

ರಾಜ್ಯೋತ್ಸವ ಅಂದರೆ ನವೆಂಬರ್ ತಿಂಗಳಿಗೆ ಮಾತ್ರ ಕನ್ನಡ ಬಳಕೆ ಸೀಮಿತವಾಗದೇ ಆಡಳಿತದಲ್ಲಿ ಕನ್ನಡ, ನಿತ್ಯ ಬಳಕೆಯಲ್ಲಿ ಕನ್ನಡ, ಕಡತದಲ್ಲಿ ಕನ್ನಡ ಬಳಕೆ ಮಾಡುವ ಮೂಲಕ ವರ್ಷಪೂರ್ತಿ ರಾಜ್ಯೋತ್ಸವ ಆಚರಣೆ ಮಾಡಲಾಗುತ್ತದೆ. ಈಗಾಗಲೇ ಆಡಳಿತದಲ್ಲಿ ಕನ್ನಡ ಬಳಕೆಗೆ ಸೂಚನೆ ನೀಡಲಾಗಿದ್ದು ಎಲ್ಲಾ ಇಲಾಖೆಯಲ್ಲಿಯು ಕನ್ನಡ ಬಳಕೆ ಕಡ್ಡಾಯ ಮಾಡಲಾಗಿದೆ. ಮತ್ತು ಕೆಲವು ಖಾಸಗಿ ಹೆದ್ದಾರಿ ಫಲಕಗಳಲ್ಲಿ ಇಂಗ್ಲೀಷ್ ಬಳಕೆ ಮಾಡಲಾಗುತ್ತಿದೆಮತ್ತುಶಾಲೆಗಳಲ್ಲಿಮಕ್ಕಳು ಇಂಗ್ಲೀಷ್‌ನಲ್ಲಿಯೇ ಮಾತನಾಡಬೇಕೆಂದು ಕಡ್ಡಾಯಗೊಳಿಸಿರುವ ಬಗ್ಗೆ ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕರ ಮೂಲಕ ಅಂತಹ ಶಾಲೆಗಳಿಗೆ ನೋಟೀಸ್ ನೀಡಲಾಗುತ್ತದೆ ಎಂದರು.

ಸಾಂಸ್ಕೃತಿ ಕಾರ್ಯಕ್ರಮ; ರಾಜ್ಯೋತ್ಸವ ಅಂಗವಾಗಿ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆಯುವ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ನಾಡು, ನುಡಿಯ ಕುರಿತಂತೆ ಗುಣಮಟ್ಟದ ನೃತ್ಯ ಕಾರ್ಯಕ್ರಮ ಏರ್ಪಾಡು ಮಾಡಲಾಗುತ್ತದೆ. ಮತ್ತು ಸಂಜೆಯ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಗ್ಲಾಸ್‌ಹೌಸ್‌ನಲ್ಲಿ ಏರ್ಪಡಿಸಲಾಗುತ್ತದೆ. ಈ ಕಾರ್ಯಕ್ರಮಗಳನ್ನು ತುಂಬಾ ಅಚ್ಚುಕಟ್ಟಾಗಿ ಏರ್ಪಡಿಸಲು ಸೂಚನೆ ನೀಡಿದರು.

ಸಿದ್ದತೆಗೆ ಸೂಚನೆ; ರಾಜ್ಯೋತ್ಸವ ಆಚರಣೆಗೆ ಅಗತ್ಯವಿರುವ ಸಿದ್ದತೆ ಕೈಗೊಳ್ಳಲು ವಿವಿಧ ಉಪಸಮಿತಿಗಳನ್ನು ರಚಿಸಲಾಗಿದ್ದು ಆಯಾ ಇಲಾಖೆ ಅಧಿಕಾರಿಗಳು ಸಿದ್ದತೆ ಕೈಗೊಳ್ಳಲು ಸೂಚನೆ ನೀಡಿ ಎಲ್ಲಾ ಇಲಾಖೆ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಕಡ್ಡಾಯವಾಗಿ ಕಾರ್ಯಕ್ರಮದಲ್ಲಿರಬೇಕೆಂದು ಸೂಚನೆ ನೀಡಿದರು.

ಈ ವೇಳೆ ವಿವಿಧ ಕನ್ನಡ ಪರ ಸಂಘಟನೆಗಳ ಪದಾಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದು ರಾಜ್ಯೋತ್ಸವ ಆಚರಣೆಗೆ ಸಂಬಂಧಿಸಿದಂತೆ ತಮ್ಮ ಸಲಹೆಗಳನ್ನು ನೀಡಿದರು.

ಅಪರಜಿಲ್ಲಾಧಿಕಾರಿ ಪಿ.ಎನ್.ಲೋಕೇಶ್, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಕೃಷ್ಣನಾಯ್ಕ್, ಪಾಲಿಕೆ ಆಯುಕ್ತೆ ರೇಣುಕಾ, ಕ.ಸಾ.ಪ ಅಧ್ಯಕ್ಷರಾದ ವಾಮದೇವಪ್ಪ, ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಸದಸ್ಯರಾದ ಡಾ; ರಾಮಚಂದ್ರಪ್ಪ ಹಾಗೂ ವಿವಿಧ ಇಲಾಖೆ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

## ವಾರ್ಡನ್ ದೂಂಡಾವರ್ತನೆ; ವಿದ್ಯಾರ್ಥಿಗಳ ಪ್ರತಿಭಟನೆ

» ಚಳ್ಳಕೆರೆ



ನಗರದ ಪಾವಗಡ ರಸ್ತೆಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವ್ಯಾಪ್ತಿಯ ಬಿಸಿಎಂ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿ ನಿಲಯದಲ್ಲಿರುವ ವಿದ್ಯಾರ್ಥಿಗಳಿಗೆ ಹಾಸ್ಟಲ್ ವಾರ್ಡ್‌ನ್ನು ಸರಿಯಾದ ಸೌಲಭ್ಯ ನೀಡದೆ ಯಾವುದೇ ವ್ಯವಸ್ಥೆ ಕಲ್ಪಿಸದೆ ದೂಂಡಾವರ್ತನೆ ಮಾಡುತ್ತಿದ್ದಾನೆಂದು ಆರೋಪಿಸಿ ಹಾಸ್ಟಲ್ ವಿದ್ಯಾರ್ಥಿಗಳು ತಾಲ್ಲೂಕು ಕಚೇರಿ ಮುಂದೆ ಪ್ರತಿಭಟನೆನಡೆಸಿ ತಹಶೀಲ್ದಾರ್‌ಗೆಮನವಿ ನೀಡಿದರು.

ಪ್ರತಿನಿತ್ಯ ನಿಲಯ ಮೇಲ್ವಿಚಾರಕರೇ ಮದ್ಯಸೇವನೆ ಮಾಡಿ ನಿಲಯಕ್ಕೆ ಬಂದು ವಿದ್ಯಾರ್ಥಿಗಳ ಮೇಲೆ ವಿಕೇಟ್‌ನಿಂದ ಹಲ್ಲೆ ನಡೆಸುತ್ತಾರೆ, ಬೆದರಿಕೆ ಹಾಕುತ್ತಾರೆ, ಮಾನಸಿಕ ಕಿರುಕುಳ ನೀಡುತ್ತಿದ್ದಾರೆ. ಸೌಲಭ್ಯಗಳ ಬಗ್ಗೆ ಪ್ರಶಸ್ತಿದರೆ ಅಂತವರನ್ನೇ ಗುರಿಯಾಗಿಸಿ ಅವರಿಗೆ ಊಟ ನೀಡದೆ, ದೌರ್ಜನ್ಯವೆಸಗುತ್ತಾರೆ. ನೀವು ಯಾರಿಗೆಬೇಕಾದರೂ ದೂರು ನೀಡಿ ನನ್ನ ಮುಂದೆನಡೆಯಲ್ಲ. ಕಾರಣ, ನನ್ನ ಸಂಬಂಧಿಯೇ ಹಿಂದುಳಿದವರ್ಗಗಳ ಜಿಲ್ಲಾ ಕಲ್ಯಾಣಾಧಿಕಾರಿಯಾಗಿದ್ದಾರೆ. ಎಂ.ಪಿ, ಎಂಎಲ್ಎಗೂ ನನ್ನ ಮೇಲೆ ದೂರು ನೀಡಿದರೂ ನಾನು ಎದರುವ ಮನುಷ್ಯನಲ್ಲ. ಇಲ್ಲಿ ನನ್ನ ಆಡಳಿತವೇ ನಡೆಯುತ್ತದೆ. ನಾನು ಹೇಳಿದಾಗೆ ಕೇಳಿಕೊಂಡು ಇರಬೇಕು ಇಲ್ಲವಾದರೆ ನಿಮ್ಮನ್ನು ಹಾಸ್ಟಲ್‌ನಿಂದ ಹೊರಹಾಕುತ್ತೇನೆಂದು ವಿದ್ಯಾರ್ಥಿಗಳ ಮೇಲೆ ದಮ್ಕಿಹಾಕುತ್ತಾನೆಂದು ದೂರು ನೀಡಿದ್ದಾರೆ.ಮುಖ್ಯಮಂತ್ರಿಗಳ ಭೇಟಿ ಹಿನ್ನೆಲೆಯಲ್ಲಿ ತಹಶೀಲ್ದಾರ್, ಜಿಲ್ಲಾಧಿಕಾರಿ, ಐಜಿಪಿಯವರೊಂದಿಗೆ ಕಾರ್ಯಕ್ರಮದಲ್ಲಿ ಚರ್ಚೆ ನಡೆಸುವ ಸಂದರ್ಭದಲ್ಲಿ ವಿದ್ಯಾರ್ಥಿಗಳಿಂದ ಮಾಹಿತಿ ಪಡೆದ ತಹಶೀಲ್ದಾರ್ ರೇಹಾನ್‌ಪಾಷ, ಯಾವುದೇ ವಿದ್ಯಾರ್ಥಿಗಳು ಆತಂಕ ಪಡಬೇಡಿ, ಸಂಬಂಧಪಟ್ಟ ಅಧಿಕಾರಿಗೆ ಮಾಹಿತಿ ನೀಡಿ ಅವ್ಯವಸ್ಥೆಯನ್ನು ಸರಿಪಡಿಸುವ ಭರವಸೆ ನೀಡಿದ್ದಾರೆ.

ವಿದ್ಯಾರ್ಥಿಗಳಾದ ಸಿ.ಕಾರ್ತಿಕ್, ಜಿ.ಆರ್. ಉದಯ್, ಕರಿಬಸಣ್ಣ, ಕೆ.ಎಸ್.ಶೇಷಾದ್ರಿ ಬಿ.ಮಧು, ಲಕ್ಷ್ಮೀಶ, ಸಂದೇಶ, ವಿ.ವಿಷ್ಣುಮೂರ್ತಿ, ಭಾಷ, ಸಂತೋಷ್, ಅಜಯ್ ಮುಂತಾದವರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

## ವೃಂದವನಹಳ್ಳಿ ಬೋರೇದೇವರು, ತಿಮ್ಮಪ್ಪಸ್ವಾಮಿ ದೇವರ ಉತ್ಸವ



» ಚಳ್ಳಕೆರೆ

ತಾಲ್ಲೂಕಿನ ಪರಶುರಾಮಪುರ ಹೋಬಳಿಯ ಪಗಡಲಬಂಡೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ವೃಂದವನಹಳ್ಳಿ ಗ್ರಾಮದ ಶ್ರೀಬೋರೇದೇವರು ಮತ್ತು ತಿಮ್ಮಪ್ಪಸ್ವಾಮಿ ದೇವರುಗಳ ಉತ್ಸವ ಗ್ರಾಮದ ಪ್ರಮುಖ ರಸ್ತೆಗಳಲ್ಲಿ ಅದ್ದೂರಿಯಾಗಿ ನಡೆಯಿತು. ನೂರಾರು ಭಕ್ತರು ಪಲ್ಲಕ್ಕಿ ಹೊತ್ತು ಮೆರವಣಿಗೆಯಲ್ಲಿ ಪಾಲ್ಗೊಂಡರು.

ಗ್ರಾಮದ ಹಿರಿಯ ಮುಖಂಡ ಶ್ರೀಕಂತಪ್ಪ ಮಾಹಿತಿ ನೀಡಿ, ಪ್ರತಿವರ್ಷ ದಸರಾ ಹಬ್ಬದ ನಂತರ ನಮ್ಮ ಗ್ರಾಮದ ದೇವರುಗಳ ಉತ್ಸವವನ್ನು ಗ್ರಾಮದ ಭಕ್ತರು ಸೇರಿ ಭಕ್ತಿ, ಶ್ರದ್ದೆಯಿಂದ ಆಚರಿಸುತ್ತೇವೆ. ಎರಡೂ ದೇವರುಗಳನ್ನು ದೇವರಗುಡಿಯಿಂದ ಪಲ್ಲಕ್ಕಿಯಲ್ಲಿ ಕೂರಿಸಿ ಮಂಗಳವಾದ್ಯಗಳೊಂದಿಗೆ ಗ್ರಾಮದ ಎಲ್ಲಾ ರಸ್ತೆಯಲ್ಲಿ ಮೆರವಣಿಗೆ ನಡೆಸಲಾಗುವುದು. ನಂತರ ಗ್ರಾಮದಲ್ಲಿರುವ ಬಸವಣ್ಣನ ದೇವಸ್ಥಾನ ಮುಂದೆ ಎರಡೂ ದೇವರನ್ನು ಪ್ರತಿಷ್ಠಾಪಿಸಿ ಪೂಜಾಕಾರ್ಯಗಳನ್ನು ನಡೆಸಲಾಗುವುದು. ಮಾರನೆ ದಿನ ಬಸವಣ್ಣನ ಆವರಣದಲ್ಲಿ ಎರಡೂ ದೇವರುಗಳಿಗೆ ಪೂಜಾ ಮತ್ತು ಸೇವಾಕಾರ್ಯ ನಡೆಸಲಾಗುತ್ತಿದೆ. ಈ ಸಂದರ್ಭದಲ್ಲಿ ನೆರೆದಿದ್ದ ಎಲ್ಲಾ ಭಕ್ತರಿಗೆ ಪೂಜೆ ಮಾಡಿದ ಬನ್ನಿಯನ್ನು ವಿತರಣೆ ಮಾಡಿ ದಸರಾ ಶುಭಾಶಯಗಳನ್ನು ವಿನಿಮಯ ಮಾಡಿಕೊಳ್ಳಲಾಗುವುದು. ಪ್ರತಿವರ್ಷದಂತೆ ದೋಣಿ ಸೇವೆ ಮಾಡಿದ ನಂತರ ಎಲ್ಲಾ ಭಕ್ತರಿಗೆ ಪ್ರಸಾದ ವಿತರಣೆ ಮಾಡಲಾಗುವುದು.ಗ್ರಾಮ ಪಂಚಾಯಿತಿ ಸದಸ್ಯರಾದ ಗೀತಮ್ಮನಾಗರಾಜು, ಕಲ್ಲೇಶಪ್ಪ, ಮಹಂತೇಶ್, ಗ್ರಾಮದಮುಖಂಡರಾದ ಜಿ.ಕೆ.ರಾಘವೇಂದ್ರ, ಹನುಮಂತರಾಯ, ತಿಪ್ಪೇಸ್ವಾಮಿ, ಕರಿಯಪ್ಪ, ಪೂಜಾರಿಗಳಾದ ತಿಪ್ಪೇಸ್ವಾಮಿ, ನಾಗೇಂದ್ರಪ್ಪ ಮುಂತಾದವರು ಭಾಗವಹಿಸಿದ್ದರು.

## ಜಿಟಿ ಜಿಟಿ ಮಳೆಗೆ ಭರ್ತಿಯಾದ ಕೆಲ್ಲೋಡು ವೇದಾವತಿ

» ನಾಗತಿಹಳ್ಳಿಮಂಜುನಾಥ್



ಹೊಸದುರ್ಗ: ಕಳೆದ ಸುಮಾರು ಒಂದು ವರ್ಷದಿಂದಲೂ ಸಹಾ ಸರಿಯಾದ ಸಮಯಕ್ಕೆ ಮಳೆ ಇಲ್ಲದೆ ಕಂಗಾಲಾಗಿದ್ದ ತಾಲೂಕಿನ ಜನತೆಗೆ ಈಗ ಮುಖದಲ್ಲಿ ನಗು ಕಾಣಿಸುತ್ತಿದೆ ಕಳೆದ ಒಂದು ವಾರದಿಂದ ತಾಲೂಕಿನಾದ್ಯಂತ ಸಂವೃದ್ಧ ಮಳೆಯಾಗಿದೆ ಇದರಿಂದ ರೈತಾಪಿ ವರ್ಗಕ್ಕಂತು ಸ್ವರ್ಗಕ್ಕೆ ಮೂರೇ ಗೇಣು ಎನ್ನುವಂತಾಗಿದೆ ಅದರಲ್ಲೂ ಹೊಸದುರ್ಗ ಪಟ್ಟಣಕ್ಕೆ ನೀರು ಒದಗಿಸುವ ಎಕೈಕ ನದಿ ಎಂದರೆ ಅದು ತಾಲೂಕಿನ ಕೆಲ್ಲೋಡು ಬಳಿ ಇರುವ ವೇದಾವತಿ ವೇದವತಿ ಭರ್ತಿಯಾಗಿ ನೀರು ಬ್ಯಾರೇಜ್ ಮೇಲೆ ಹರಿಯುತ್ತಿರುವುದನ್ನು ನೋಡಿದರೆ ನೆಮ್ಮದಿಯ ನಿಟ್ಟುಸಿರು ಬಿಡುವಂತಾಗಿದೆ ಇದೀಗ ಹರಿದು ಬರುತ್ತಿರುವ ನೀರಿನಲ್ಲಿ ಇಳಿದು ಸಾರ್ವಜನಿಕರು ಸಂತಸ ಪಡುತ್ತಿದ್ದಾರೆ.

ಈ ವೇದಾವತಿ ಭರ್ತಿಯಾಗಿರುವ ಹಿನ್ನೆಲೆಯಲ್ಲಿ ಹೊಸದುರ್ಗ ಪಟ್ಟಣಕ್ಕೆ ನೀರು ಸರಬರಾಜು ಮಾಡುವುದು ಕಷ್ಟದ ಕೆಲಸವೇನಲ್ಲ ಎನ್ನುವಂತಾಗಿದ್ದು ಈಗ ವೇದಾವತಿ ನದಿ ಭರ್ತಿಯಾಗಿರುವುದು ಒಂದು ಪವಾಡವೇ ನಡೆದಂತಾಗಿದೆ.ಇದರಿಂದ ನದಿಯ ಹಾಸು ಪಾಸಿನಲ್ಲಿರುವ ರೈತರು ಹರ್ಷ ಚಿತ್ತರಾಗಿದ್ದಾರೆ.

ತಾಲ್ಲೂಕಿನ ಜೀವನಾಡಿಯಾದ ವೇದಾವತಿ ನದಿಯು ಹರಿದು ವಾಣಿ ವಿಲಾಸ ಸಾಗರ ಸೇರಿ ಜಿಲ್ಲೆಯ ಬಹುತೇಕ ರೈತರಿಗೆ ಬೆಳೆ ಬೆಳೆಯಲು ಹಾಗೂ ಸಾರ್ವಜನಿಕರಿಗೆ ಕುಡಿಯುವ ನೀರಿನ ಪೂರೈಕೆಗೆ ಅನುಕೂಲವಾಗಿದ್ದು. ಪ್ರಸ್ತುತ ಸಾಲಿನಲ್ಲಿ ಸರಿಯಾಗಿ ಮಳೆಯಾಗದೆ ಹೊಸದುರ್ಗ ತಾಲ್ಲೂಕನ್ನು ಬರ ಪೀಡಿತ ತಾಲ್ಲೂಕು ಎಂದು ಸರ್ಕಾರ ಘೋಷಣೆ ಮಾಡಿತ್ತು.ಉತ್ತಮ ಮಳೆ ಆದ ಕಾರಣ ಕೆಲ್ಲೋಡು ಬ್ಯಾರೇಜ್ ಸೇರಿ ಆಲಗಟ್ಟ, ಬಲ್ಲಾಳಸಮುದ್ರ, ಕಾರೆಹಳ್ಳಿ ಚೆಕ್ ಡ್ಯಾಮ್‌ಗಳು ಭರ್ತಿಯಾಗಿ ಹರಿದು ವಾಣಿ ವಿಲಾಸ ಸಾಗರ ಡ್ಯಾಮ್ ಸೇರುತ್ತಿದೆ,

## ಪೊಲೀಸ್ ಹುತಾತ್ಮರ ದಿನಾಚರಣೆ

ದಾವಣಗೆರೆ: ಜಿಲ್ಲಾ ಪೊಲೀಸ್ ಇಲಾಖೆ ವತಿಯಿಂದ ಅಕ್ಟೋಬರ್ 21 ರಂದು ಬೆಳಿಗ್ಗೆ 8 ಗಂಟೆಗೆ ನಗರದ ಜಿಲ್ಲಾ ಪೊಲೀಸ್ ಕವಾಯತು ಮೈದಾನದಲ್ಲಿ ಪೊಲೀಸ್ ಹುತಾತ್ಮರ ದಿನಾಚರಣೆಯನ್ನು ಆಯೋಜಿಸಲಾಗಿದೆ. ಪೂರ್ವವಲಯ ಪೊಲೀಸ್ ಉಪಮಹಾನಿರೀಕ್ಷಕರಾದ ಬಿ.ರಮೇಶ್ ಅಧ್ಯಕ್ಷತೆ ವಹಿಸುವರು.

**ಪ್ರಮುಖ ಸುದ್ದಿ**

# ಜೀವನಶೈಲಿ ಬದಲಾವಣೆ ಅತ್ಯಗತ್ಯ: ಟಿಎಚ್‌ಓ ಡಾ.ಬಿ.ವಿ.ಗಿರೀಶ್

» ಚಿತ್ರದುರ್ಗ



ಜೀವನ ಶೈಲಿ ಬದಲಾಗದಿದ್ದರೆ ಅಸಾಂಕ್ರಾಮಿಕ ರೋಗಗಳ ಕಾಟ ಹೆಚ್ಚಾಗುವ ಸಾಧ್ಯತೆ ಇದೆ ಎಂದು ತಾಲ್ಲೂಕು ಆರೋಗ್ಯಾಧಿಕಾರಿ ಬಿ.ವಿ ಗಿರೀಶ್ ಹೇಳಿದರು. ಚಿತ್ರದುರ್ಗ ತಾಲೂಕಿನ ಗುಡ್ಡದ ರಂಗವ್ವನಹಳ್ಳಿ ಗ್ರಾಮದಲ್ಲಿ ಆರೋಗ್ಯ ಇಲಾಖೆ, ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಸಹಯೋಗದೊಂದಿಗೆ ನಡೆದ ಆರೋಗ್ಯ ತಪಾಸಣಾ ಶಿಬಿರದಲ್ಲಿ ಅವರು ಮಾತನಾಡಿದರು.

ಜಂಕ್ ಫುಡ್ ಬಳಕೆಗೆ ಕಡಿವಾಣ ಹಾಕಿ, ಸಮತೋಲನ ಆಹಾರ ಸೇವನೆ ಮಾಡಿದರೆ ಮಾತ್ರ ಉತ್ತಮ ಆರೋಗ್ಯ ಹೊಂದಬಹುದು ಇಲ್ಲವಾದಲ್ಲಿ ಅಸಾಂಕ್ರಾಮಿಕ ರೋಗಗಳು ಹೆಚ್ಚಾಗುವ ಸಾಧ್ಯತೆ ಇದೆ ಎಂದು ಅವರು ಹೇಳಿದರು. ಪ್ರತಿಯೊಬ್ಬರೂ ಒಂದಿಲ್ಲೊಂದು ಚಟುವಟಿಕೆಗಳಲ್ಲಿತೊಡಗಿಕೊಂಡುಉತ್ತಮ ಆರೋಗ್ಯ ಹೊಂದಬೇಕೆಂದರು. ಆರೋಗ್ಯ ಕಾರ್ಯಕ್ರಮಗಳು ಮನೆ ಬಾಗಿಲಿಗೆ ತಲುಪುತ್ತಿವೆ ಇದರ ಸದುಪಯೋಗ ಪಡಿಸಿಕೊಳ್ಳಬೇಕು ಎಂದರು. ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ ಮಾತನಾಡಿ, ಆಧುನಿಕ ಕಾಲದಲ್ಲಿ ಒತ್ತಡದ ಜೀವನ, ತಂತ್ರಜ್ಞಾನಗಳ ಬಳಕೆ ಹೆಚ್ಚುತ್ತಿದ್ದು, ಯುವಕರೇ ಹೆಚ್ಚು ದುಶ್ಚಟಕ್ಕೆ ದಾಸರಾಗುತ್ತಿದ್ದು, ಮೂಢನಂಬಿಕೆ, ಮನಸ್ಸಿಗೆ ಶಾಂತಿ ನೆಮ್ಮದಿ ಇಲ್ಲದಾಗಿ ನಾನಾ ರೀತಿಯ ಚಿಂತೆಗೊಳಗಾಗಿ ಒಂದಿಲ್ಲೊಂದು ಅಸಾಂಕ್ರಾಮಿಕ ರೋಗಕ್ಕೆ ಸಾರ್ವಜನಿಕರು ತುತ್ತಾಗುತ್ತಿದ್ದಾರೆ. 30 ವರ್ಷ ಮೇಲ್ಪಟ್ಟವರೆಲ್ಲರೂ ವೈದ್ಯಕೀಯ ಉಪಾಸಣೆಗೆ ಒಳಪಡಬೇಕು ಎಂದರು.

ವೈದ್ಯಕೀಯ ಶಾಸ್ತ್ರದ ಪಿತಾಮಹ ಹೇಳಿರುವಂತೆ "ಆಹಾರವೇ ನಿನ್ನ ಔಷಧಿಯಾಗಿರಲಿ" ಆದರೆ ಔಷಧಿ ಸೇವನೆ ಇಲ್ಲದೆ ಜೀವಿಸುವವರ ಸಂಖ್ಯೆ ಕ್ಷೀಣಿಸುತ್ತಿದೆ ಪ್ರಯುಕ್ತ ಎಣ್ಣೆ ಪದಾರ್ಥ, ಮಾಂಸ ಆಹಾರ ಕಡಿಮೆ ಮಾಡಿ' ಹಸಿ ತರಕಾರಿಗಳ ಬಳಕೆ ಮಾಡುತ್ತಾ, ದುರಾಸೆ ದೂರ ಮಾಡಿ. ಸಂತಸದ ಬದುಕನ್ನು ಕಟ್ಟಿಕೊಂಡು. ಕಿರುದಾನ್ಯಗಳ ಬಳಕೆ, ಕಾಲಮಾನಕ್ಕೆ ಸಿಗುವ ಹಣ್ಣು ಹಂಪಲುಗಳ ಬಳಕೆ, ನಿತ್ಯ ಚಟುವಟಿಕೆಗಳಲ್ಲಿ ತೊಡಗಿ, ವ್ಯಾಯಾಮ, ಧ್ಯಾನ, ಸಕಾಲಕ್ಕೆ ನಿದ್ದೆ ಮಾಡುತ್ತಾ ಆರೋಗ್ಯ ಕಾಪಾಡಿಕೊಳ್ಳಬೇಕೆಂದರು.

ಇದೇ ಸಂದರ್ಭದಲ್ಲಿ 95 ಜನ ಮಹಿಳೆಯರು ಅಸಂಕ್ರಾಮಿಕ ರೋಗಗಳ ತಪಾಸಣೆಗೆ ಒಳಪಟ್ಟರು, ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ 10 ಜನ ಜನರಿಗೆ ಕನ್ನಡಕ ವಿತರಣೆ, ಔಷಧೋಪಚಾರ ನೀಡಲಾಯಿತು. ಕಾರ್ಯಕ್ರಮದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಜಿಲ್ಲಾ ನಿರ್ದೇಶಕ ದಿನೇಶ್ ಪೂಜಾರಿ, ವಿಶ್ವ ಬಂದು ಆಸ್ಪತ್ರೆ ವೈದ್ಯರಾದ ಆನೆಶ್, ಗ್ರಾಮ ಪಂಚಾಯಿತಿ ಉಪಾಧ್ಯಕ್ಷರಾದ ರೂಪ. ಪಿಎಚ್‌ಸಿ ವೈದ್ಯಾಧಿಕಾರಿ ಡಾ.ಗೀತಾಂಜಲಿ. ಆರೋಗ್ಯ ನಿರೀಕ್ಷಣಾಧಿಕಾರಿ ಪ್ರಶಾಂತ್, ಪ್ರವೀಣ್ ಕುಮಾರ್., ಪಿಎಚ್‌ಸಿಓ ಮಂಜುಳಾ. ಆಶಾ ಕಾರ್ಯಕರ್ತೆಯರು ಭಾಗವಹಿಸಿದ್ದರು. ಜ್ಞಾನವಿಕಾಸ ಸಮನ್ವಯಾಧಿಕಾರಿ ಶಿವಲೀಲಾ ಕಾರ್ಯಕ್ರಮ ನಿರೂಪಿಸಿದರು. ಸೇವಾ ಪ್ರತಿನಿಧಿ ತಿಪ್ಪಮ್ಮ ಹಾಗೂ 120ಕ್ಕೂ ಹೆಚ್ಚು ಜನ ಶಿಬಿರದಲ್ಲಿ ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಜನರ ಆಶೀರ್ವಾದಕ್ಕೆ ಮಂಟಪ ಸಿದ್ಧ: ಎಲ್ಲರೂ ಬನ್ನಿ ಶುಭಹಾರೈಸಿ

» ಮೊದಲ ಪುಟದಿಂದ

ಸುಮಾರು 3 ಸಾವಿರಕ್ಕೂ ಹೆಚ್ಚು ವಿಐಪಿಗಳು ಒಂದೇ ಸಾರಿ ಬೋಜನ ಮಾಡುವ ವ್ಯವಸ್ಥೆ ಮಾಡಲಾಗಿದೆ. ಸಾರ್ವಜನಿಕರಿಗೆ ಪ್ರತ್ಯೇಕವಾಗಿ ಎರಡು ಜರ್ಮನ್ ಟೆಂಟ್ ನಿರ್ಮಿಸಿದ್ದು, ಒಂದರಲ್ಲಿ ಸುಮಾರು 5 ಸಾವಿರದಂತೆ ಒಟ್ಟು 10 ಸಾವಿರ ಜನರು ಊಟದಲ್ಲಿ ಭಾಗವಹಿಸಬಹುದಾಗಿದೆ. ಇದಕ್ಕೆ ಹೊಂದಿಕೊಂಡಂತೆ ಹೆಚ್ಚುವರಿಯಾಗಿ ಎರಡು ಸೆಟ್ ನಿರ್ಮಿಸಿದ್ದು ಅಲ್ಲೂ ಸಹ ಒಂದೇಹಂತದಲ್ಲಿ 6 ಸಾವಿರ ಜನರು ಭಫೇ ಸ್ವೀಕರಿಸಬಹುದು. ಚಳ್ಳಕೆರೆತಾಲ್ಲೂಕಿನದಲ್ಲಿ ಈ ಹಿಂದೆ ಈ ಕ್ಷೇತ್ರದ ಮಾಜಿ ಸಚಿವ ತಿಪ್ಪೇಸ್ವಾಮಿ, ಹಾಲಿ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ ತಮ್ಮ ಪುತ್ರಿಯರ ವಿವಾಹವನ್ನು ಇದೇ ಸ್ಥಳದಲ್ಲಿ ಮಾಡಿದ್ದರು. ಈಗ ಹ್ಯಾಟ್ರಿಕ್ ಶಾಸಕರೂ ಸಹ ತಮ್ಮ ಪುತ್ರಿವಿವಾಹ ಇಲ್ಲೇ ಮಾಡುವ ಮೂಲಕ ಜನರ ವಿಶ್ವಾಸಕ್ಕೆ ಪಾತ್ರರಾಗಿದ್ದಾರೆ.

### ವಾಣಿ ವಿಲಾಸ ಜಲಾಶಯದ ಕೋಡಿ ತಗ್ಗಿಸುವ ಬಿಡಲ್ಲ

» ಮೊದಲ ಪುಟದಿಂದ

ರೈತ ಸಂಘ ಹಾಗೂ ಹಸಿರು ಸೇನೆ ತಾಲೂಕು ಅಧ್ಯಕ್ಷ ಕೆಟಿ. ತಿಪ್ಪೇಸ್ವಾಮಿ ಮಾತನಾಡಿ ತಾಲೂಕಿನಲ್ಲಿರುವ ಜಲಾಶಯಗಳು, ಕೆರೆಗಳು ಹಾಗೂ ಚೆಕ್ ಡ್ಯಾಂನಂತಹ ಜಲಮೂಲಗಳ ಅಭಿವೃದ್ಧಿ ಮಾಡಬೇಕು. ಇಲ್ಲವಾದಲ್ಲಿ ಜನ ಬೀದಿಗಿಳಿದು ಹೋರಾಟ ಮಾಡಬೇಕಾಗುತ್ತದೆ. ಜೊತೆಗೆ ವಾಣಿ ವಿಲಾಸ ಜಲಾಶಯ ಉಳಿವಿಗಾಗಿ ಹಗಲಿರುಳು ಹೋರಾಟಕ್ಕೆ ನಾವು ಸಿದ್ಧರಿದ್ದೇವೆ ಎಂದರು.ಹಿರಿಯ ಮುಖಂಡ ಆಲೂರು ಸಿದ್ದರಾಮಣ್ಣ ಮಾತನಾಡಿ ರಾಜಕಾರಣಿಗಳು ಮತ್ತು ಅಧಿಕಾರಿಗಳ ಷಡ್ಯಂತ್ರಕ್ಕೆ ವಿವಿ ಸಾಗರ ಡ್ಯಾಂ ಬಲಿಕೊಡಲು ನಾವು ಬಿಡುವುದಿಲ್ಲ. ಒಂದು ವೇಳೆ ಕೋಡಿ ತಗ್ಗಿಸಲು ಮುಂದಾದಲ್ಲಿ ರೈತರು ದಂಗೆ ಏಳಲಿದ್ದಾರೆ. ಪ್ರಸ್ತಾವನೆ ಸಲ್ಲಿಸಿರುವವರು ಯೋಚನೆ ಮಾಡಲಿ ಎಂದರು.ರೈತ ಸಂಘದ ಅಧ್ಯಕ್ಷ ಬ್ಯಾಡರಹಳ್ಳಿ ಶಿವಕುಮಾರ್ ಮಾತನಾಡಿ ತಾಲೂಕಿನ ನೆಲ, ಜಲ ಎಂದಾಗ ನಾವೆಲ್ಲರೂ ಒಂದಾಗಬೇಕು. ನಮ್ಮಲ್ಲಿ ಎಷ್ಟೇ ಬೇರೆ ಬೇರೆ ರೈತ ಸಂಘಟನೆಗಳಿದ್ದರೂ ನೀರಿನ ವಿಚಾರದಲ್ಲಿ ಒಗ್ಗಟ್ಟಾಗಿರುತ್ತೇವೆ. ಮತಕ್ಕಾಗಿ ಮಾಡುವ ರಾಜಕಾರಣಿಗಳ ಷಡ್ಯಂತ್ರವನ್ನು ಮುರಿಯುತ್ತೇವೆ ಎಂದು ಗುಡುಗಿದರು.ಈ ಸಂದರ್ಭದಲ್ಲಿ ಕೃಷಿಕ ಸಮಾಜದ ಅಧ್ಯಕ್ಷ ಹೆಚ್.ಆರ್. ತಿಮ್ಮಯ್ಯ, ಹಿರಿಯ ರೈತ ಮುಖಂಡ ಆರನಕಟ್ಟೆ ಶಿವಕುಮಾರ್, ಆರ್. ಕೆ ಗೌಡ್ರು, ಪಿಟ್ಲಾಲಿ ಶ್ರೀನಿವಾಸ್, ನಾಗೇನಹಳ್ಳಿ ಮೂಡಲಗಿರಿಯಪ್ಪ, ಬಬ್ಬೂರು ಸುರೇಶ್, ಗಡಾರಿ ಕೃಷ್ಣಪ್ಪ, ರಾಜು, ನಾಗರಾಜ್, ನಿವೃತ್ತ ಪ್ರಾಂಶುಪಾಲ ಬಿ. ರಾಜಶೇಖರ್, ಬೀರೇನಹಳ್ಳಿ ಶಿವಣ್ಣ, ಕುಬೇರಪ್ಪ, ರಾಮಚಂದ್ರ, ಕರಿಬಸಣ್ಣ, ಬಂಗಾರಪ್ಪ, ಮಹಾಲಿಂಗಪ್ಪ ಮುಂತಾದವರು ಉಪಸ್ಥಿತರಿದ್ದರು.

### ವಿದ್ಯುತ್ ಸ್ಪರ್ಷ ಸಿಂಧಿ ಹಸು ಸಾವು

» ಹೊಸದುರ್ಗ

ಪಟ್ಟಣದ ಒಂದನೇ ವಾರ್ಡಿನಲ್ಲಿರುವ ಜೋಡಿ ವಿದ್ಯುತ್ ಕಂಬದ ಸಮೀಪ ಸಿಂದಿ ಹಸುವೊಂದು ಮೇಯಲು ಹೋದಾಗ ವಿದ್ಯುತ್ ಸ್ಪರ್ಷಿಸಿದ ಪರಿಣಾಮ ಸ್ಥಳದಲ್ಲೆ ಸಾವನ್ನಪ್ಪಿದೆ. ಹಸುವು ಒಂದನೇ ವಾರ್ಡಿನ ನಿವಾಸಿ ರಾಮಪ್ಪ ಎಂಬುವವರಿಗೆ ಸೇರಿದ್ದು ಎಂದು ತಿಳಿದು ಬಂದಿದ್ದು ಹಸುವಿನ ಸಾವಿನಿಂದ ಸುಮಾರು 50 ಸಾವಿರ ರೂ ಮಾಲಿಕರಿಗೆ ನಷ್ಟವಾಗಿದೆ. ಈ ವಿದ್ಯುತ್ ಕಂಬದ ಸುತ್ತಾ ಯಾವುದೇ ಭದ್ರತೆ ಎಂಬುದು ಇಲ್ಲ ಅಲ್ಲದೆ ಇಲ್ಲಿ ಯಾವಾಗಲೂ ಸಹಾ ನೀರು ನಿಂತಿರುತ್ತವೆ ಇಲ್ಲಿ ಪದೇ ಪದೇ ವಿದ್ಯುತ್ ಅವಘಡಗಳು ಆಗುತ್ತಲೆ ಇರುತ್ತದೆ ಇಷ್ಟಾದರೂ ಈ ಭಾಗದ ಪುರಸಭಾ ಸದಸ್ಯರಾಗಲಿ ಅಥವಾ ಬೆಸ್ಕಾಂ ಇಲಾಖೆಯವರಾಗಲಿ ಯಾವುದೇ ಸೂಕ್ತ ಕ್ರಮ ತಗೆದುಕೋಳ್ಳದೆ ಇರುವುದು ಈ ಬಡಾವಣೆಯ ನಾಗರೀಕರಿಗೆ ನುಂಗಲಾರದ ತುತ್ತಾಗಿದೆ ಈಗಲಾದರೂ ಸಹಾ ಬೆಸ್ಕಾಂ ಇಲಾಖೆಯವರು ಈ ಜೋಡಿ ವಿದ್ಯುತ್ ಕಂಬಕ್ಕೆ ಸುತ್ತಲೂ ಸಹಾ ತಂತಿ ಬೇಲಿಯನ್ನ ಹಾಕಿ ಭದ್ರಪಡಿಸಿ ಮುಂದಾಗುವ ಅನಾಹುತಗಳನ್ನ ತಪ್ಪಿಸಬಹುದು ಎಂಬುದು ಈ ಬಡಾವಣೆಯ ನಾಗರೀಕರ ಮನವಿಯಾಗಿದೆ.

### ಚಿಗಟೇರಿ ಆಸ್ಪತ್ರೆ ಆರೋಗ್ಯ ರಕ್ಷಾ ಸಲಹಾ ಸಮಿತಿಗೆ ಸದಸ್ಯರುಗಳ ಆಯ್ಕೆ

» ದಾವಣಗೆರೆ

ನಗರದ ಸಾರ್ವಜನಿಕರ ಆಸ್ಪತ್ರೆಯ ಆರೋಗ್ಯ ರಕ್ಷಾ ಸಮಿತಿಗೆ ನೂತನವಾಗಿ ಸದಸ್ಯರನ್ನು ಆಯ್ಕೆ ಮಾಡಲಾಗಿದೆ. ವೆಂಕಟೇಶ್ ನಾಯ್ಕ ಬಿನ್ ಚಂದ್ರನಾಯ್ಕ, ಜಿ. ದೇವೇಂದ್ರಪ್ಪ ಬಿನ್ ಗೋವಿಂದಪ್ಪ, ಲೀಲಾ ಕೆ.ಎನ್ ಕೋಂ ಕೆ.ಸಿ. ನಾಗರಾಜ , ರುದ್ರೇಶ್ ಎಸ್.ಎಂ ಬಿನ್ ಶಿವಯ್ಯ ಎಂ , ಮಹಾಂತೇಶ ಜಿ.ಹೆಚ್ ಬಿನ್ ಹನುಮಂತಪ್ಪ, ವಿನಾಯಕ ಎಸ್.ವಿ ಬಿನ್ ವಿಶ್ವಮೂರ್ತಿ, ಕೋಳಿ ಇಬ್ರಾಹಿಂ ಬಿನ್ ಶೇಖ್ ಸಾಬ್ , ಶಿವಮೂರ್ತಿ ಎಂ.ಬಿ ಬಿನ್ ಬಸವರಾಜಪ್ಪ ಎಂ.ಹೆಚ್ ಇವರುಗಳನ್ನು ಅಧಿಕಾರೇತರ ಸದಸ್ಯರನ್ನಾಗಿ ಆಯ್ಕೆ ಮಾಡಲಾಗಿದೆ.

# ತಾಲ್ಲೂಕಿನಾದ್ಯಂತ ಚಿತ್ತಮಳೆಯ ಅವಾಂತರ

## ತುಂಬಿ ಹರಿದಕೆರೆ ಕಟ್ಟೆಗಳು-ಅಜ್ಜಯ್ಯನಗುಡಿ ಕೆರೆಗೆ ಕೋಡಿಭಾಗ್ಯ-ಲಕ್ಷಾಂತರ ರೂ ಮೌಲ್ಯದ ಬೆಳೆಗಳು ನೀರಿಗೆ ಆಹುತಿ

» ಚಳ್ಳಕೆರೆ

ತಾಲ್ಲೂಕಿನಾದ್ಯಂತಚಿತ್ತಮಳೆಪ್ರಾರಂಭವಾಗಿ ಕೇವಲ ಹತ್ತು ದಿನಗಳಾಗಿವೆ. ಕಳೆದ ಅ.10ರಿಂದಮಳೆಪ್ರಾರಂಭವಾಗಿತಾಲ್ಲೂಕಿನ ಯಾವುದೇ ಪ್ರದೇಶ ಒಣಗದಂತೆ ಎಲ್ಲೆಡೆ ಸರಾಗವಾಗಿ ಸಮೃದ್ಧಿಯಾಗಿ ನೀರು ನಿಂತು ಚಿತ್ತಮಳೆಯ ವೈಭವವನ್ನು ಜನರು ಸವಿಯುತ್ತಿದ್ದಾರೆ.

ತಾಲ್ಲೂಕಿನ ನಾಯಕನಹಟ್ಟಿ, ತಳಕು, ಕಸಬಾ ಹೋಬಳಿ ಸೇರಿದಂತೆ ಎಲ್ಲೆಡೆ ನಿರೀಕ್ಷೆಗೂ ಮೀರಿದ ಮಳೆಯಾಗಿದೆ. ವಿಶೇಷವಾಗಿ ನಾಯಕನಹಟ್ಟಿ ಹೋಬಳಿಯ ಬಹುತೇಕ ಎಲ್ಲಾ ಕೆರೆ ತುಂಬಿದರೆ, ಕೆಲವು ಕೆರೆಗಳು ಕೋಡಿ ಬಿದ್ದಿವೆ. ತಳಕು ಹೋಬಳಿ ಮಟ್ಟದಲ್ಲೂ ಚಿತ್ತಮಳೆಯ ಆರ್ಭಟ ಜೋರಾಗಿದೆ. ಈ ಭಾಗದಲ್ಲೂ ಸಹ ಹಲವಾರು ಕೆರೆಗಳು ತುಂಬಿವೆ. ಕಸಬಾಹೋಬಳಿ ಮಟ್ಟದಲ್ಲೂ ಸಹ ಮಳೆಯ ಪ್ರಮಾಣ ಗಣನೀಯವಾಗಿ ಏರಿದೆ. ರೈತರ ಬೆಳೆಗಳಿಗೆ ನೀರು ನುಗ್ಗಿನಷ್ಟವಾದರೆ, ಕೆಲವೆಡೆ ಮನೆಗಳು ಕುಸಿದು ಬಿದ್ದಿವೆ. ಜಾನುವಾರುಗಳು ಸಹ ನೀರಿನಲ್ಲಿ ತೇಲಿಹೋಗಿವೆ.

ಈ ವರ್ಷದ ಚಿತ್ತಮಳೆಯ ವಿಶೇಷವೆಂದರೆ ನಗರ ವ್ಯಾಪ್ತಿಯ ಅಜ್ಜಯ್ಯನಗುಡಿ ಕೆರೆತುಂಬಿ ಕೋಡಿ





ಬಿದ್ದಿದೆ. ಇದಕ್ಕೆ ಹೊಂದಿಕೊಂಡಿರುವ ಕರೇಕಲ್ ಕೆರೆಯೂ ಸಹ ತುಂಬಿದ್ದು ಇನ್ನೂ ಕೆಲವೇ ದಿನಗಳಲ್ಲಿ ಕೋಡಿಬೀಳುವ ಸಂಭವವಿದೆ. ನಾಯಕನಹಟ್ಟಿ ಹೋಬಳಿಯ ಭೀಮನಕೆರೆ ಗ್ರಾಮದ ಕೆರೆ ಬಹಳ ವರ್ಷಗಳ ನಂತರ ಕೋಡಿ ಬಿದಿದ್ದು, ಕೋಡಿ ನೀರಿನಲ್ಲಿ 7 ಕುರಿಗಳು ಕೊಚ್ಚಿ ಹೋಗಿವೆ.

ನೀರಿನಲ್ಲಿ ಸಿಲುಕಿದ ಬಸ್ :- ಖಾಸಗಿ ಶಾಲೆಗೆ ಮಕ್ಕಳನ್ನು ಕರೆತರುತ್ತಿದ್ದ ಕಾಲೇಜು ಬಸ್ ತಳಕು ಗ್ರಾಮದ ತಳಕು ಗ್ರಾಮದ ರೈಲ್ವೆ ಬ್ರಿಡ್ಜ್ ಕೆಳಗೆ ಸಾಗುವಾಗ ನಿಂತಿದ್ದು ಗ್ರಾಮಸ್ಥರು ಬಸನ್ನು ದಡಕ್ಕೆ ತಂದಿದ್ದಾರೆ. ಕೆಲಕಾಲ ವಿದ್ಯಾರ್ಥಿಗಳು ಆತಂಕಕ್ಕೆ ಒಳಗಾದರು.

ಇದೇ ಹೋಬಳಿಯ ವರವು ಗ್ರಾಮದಲ್ಲಿ ಪುರಿಚೆನ್ನಯ್ಯನಹಟ್ಟಿಯ ಗಗ್ಗಬೋರಯ್ಯ ಎಂಬುವವರ ಜಮೀನಿನಲ್ಲಿದ್ದ ಈರುಳ್ಳಿ, ಮೆಕ್ಕೆಜೋಳ, ರಾಗಿ ಬೆಳೆನೀರಿನಲ್ಲಿ ಕೊಚ್ಚಿಹೋಗಿ ಸುಮಾರು ಎರಡು ಲಕ್ಷ ನಷ್ಟ ಸಂಭವಿಸಿದೆ. ಗಂಪಲೋಬಯ್ಯನ ಕಪ್ಪಿಲೆಯಲ್ಲಿದ್ದ ಸುಮಾರು10 ಮನೆಗಳಿಗೆ ನೀರು ನುಗ್ಗಿದ್ದು ಮನೆಯಲ್ಲಿನ ಎಲ್ಲಾ ವಸ್ತುಗಳು ನೀರಿನಲ್ಲಿ ತೇಲಿವೆ. ಮನೆಗೆ ನೀರು ನುಗ್ಗಿದ ಸಂದರ್ಭದಲ್ಲಿ ಮನೆಯಲ್ಲಿದ್ದ ಪುಟ್ಟಮಕ್ಕಳು, ಮಹಿಳೆಯರು ಪ್ರಾಣ ರಕ್ಷಿಸಿಕೊಳ್ಳಲು ಪ್ರಯಾಸಪಟ್ಟಿದ್ದಾರೆ. ಕುದಾಪುರ ಗ್ರಾಮದ ಸರ್ವೆ ನಂ 37ರಲ್ಲಿದ್ದ ಶೇಂಗಾ ಬೆಳೆ ನೀರಿನಲ್ಲಿ ಕೊಚ್ಚಿಹೋಗಿ ಲಕ್ಷಾಂತರ ನಷ್ಟ ಸಂಭವಿಸಿದೆ. ಇದೇ ಗ್ರಾಮದ ಪಾರ್ವತಿಬಾಯಿ ಎಂಬುವವರ ಜಮೀನಿನಲ್ಲಿದ್ದ ರಾಗಿ, ತೊಗರಿ ಬೆಳೆ ನೀರಿನಲ್ಲಿ ಮುಳುಗಿ ಸಂಪೂರ್ಣ ನಷ್ಟವಾಗಿದೆ.

ರಾಮಾನಾಯ್ಕ ಎಂಬುವವರ ಎರಡು ಎಕರೆ ಶೇಂಗಾ ಬೆಳೆ ನೀರಿನಲ್ಲಿ ಕೊಚ್ಚಿಹೋಗಿ50 ಸಾವಿರ ನಷ್ಟವಾಗಿದೆ.

ಮನೆಗಳಿಗೆ ಹಾನಿ :- ಏಕಾಏಕಿ ಮನೆಗಳಿಗೆ ನೀರು ನುಗ್ಗಿದ ಪರಿಣಾಮವಾಗಿ ಹಲವಾರು ಮನೆಗಳು ಕುಸಿದು ಬಿದ್ದಿವೆ. ಘಟಪರ್ತಿ ಗ್ರಾಮದ ತಿಪ್ಪಮ್ಮ ಎಂಬುವವರ ಮನೆಗೆ ನೀರು ನುಗ್ಗಿ ಮನೆಯಲ್ಲಿದ್ದ ಎಲ್ಲಾ ವಸ್ತುಗಳು ಹಾಳಾಗಿ 40 ಸಾವಿರ ನಷ್ಟ ಸಂಭವಿಸಿದೆ.

ಎನ್.ಗೌರಿಪುರ ಗ್ರಾಮದ ಶಿವಮ್ಮ, ರಾಮಾಂಜನೇಯರವರ ಮನೆಗಳು ಕುಸಿದುಬಿದ್ದು 90 ಸಾವಿರ ನಷ್ಟವಾಗಿದೆ. ಇದೇ ಗ್ರಾಮದ ಪಾರ್ವತಿಬಾಯಿ ಎಂಬುವವರ ಮನೆ ಕುಸಿದು 45 ಸಾವಿರ ನಷ್ಟಸಂಭವಿಸಿದೆ. ಗೌಡಗೆರೆ ಗ್ರಾಮದ ತಿಪ್ಪಮ್ಮ ಎಂಬುವವರ ಮನೆಕುಸಿದು ಬಿದ್ದು 25 ಸಾವಿರ ನಷ್ಟ ಸಂಭವಿಸಿದೆ.



ಚಳ್ಳಕೆರೆ ತಾಲ್ಲೂಕಿನ ವರವು ಗ್ರಾಮದ ವರವು ಗ್ರಾಮದಲ್ಲಿ ಪುರಿಚೆನ್ನಯ್ಯನಹಟ್ಟಿಯ ಗಗ್ಗಬೋರಯ್ಯ ಜಮೀನಿನಲ್ಲಿದ್ದ ಈರುಳ್ಳಿ ಮಳೆ ನೀರಿನಲ್ಲಿ ತೇಲಿರುವುದು.



ಚಳ್ಳಕೆರೆತಾಲ್ಲೂಕಿನ ತಳಕು ಗ್ರಾಮದ ರೈಲ್ವೆ ಬ್ರಿಡ್ಜ್ ಕೆಳಗೆ ಸಿಲುಕಿದ್ದ ಬಸನ್ನು ರಕ್ಷಿಸಿದ ಗ್ರಾಮಸ್ಥರು.



ಚಳ್ಳಕೆರೆ ತಾಲ್ಲೂಕಿನ ತಳಕು ಹೋಬಳಿಯ ಲಂಬಾಣಿಹಟ್ಟಿಯಲ್ಲಿ ಮಳೆ ನೀರಿನಿಂದ ಮೆಕ್ಕೆಜೋಳ ಬೆಳೆ ಆವೃತ್ತವಾಗಿರುವುದು.

# ನ.11ರ ಒನಕೆ ಓಬವ್ವ ಜಯಂತಿಯಲ್ಲಿ ಛಲವಾದಿ ಸಮುದಾಯದವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ

» ಚಿತ್ರದುರ್ಗ

ಮುಂದಿನ ತಿಂಗಳು ನಡೆಯುವ ಒನಕೆ ಓಬವ್ವ ಜಯಂತಿಯನ್ನು ಅದ್ದೂರಿಯಾಗಿ ಆಚರಿಸುವ ಸಂಬಂಧ ಪ್ರವಾಸಿ ಮಂದಿರದಲ್ಲಿ ಛಲವಾದಿ ಜನಾಂಗದವರು ಭಾನುವಾರ ಪೂರ್ವಭಾವಿ ಸಭೆ ನಡೆಸಿ ಚರ್ಚಿಸಿದರು.

ನಗರಸಭೆ ಮಾಜಿ ಅಧ್ಯಕ್ಷ ಛಲವಾದಿ ಜನಾಂಗದ ಮುಖಂಡ ಹೆಚ್.ಸಿ.ನಿರಂಜನಮೂರ್ತಿ ಸಭೆಯನ್ನುದ್ದೇಶಿಸಿ ಮಾತನಾಡುತ್ತ ಒನಕೆಯ ಮೂಲಕ ಶತ್ರುಗಳನ್ನು ಸದೆಬಡಿದು ಐತಿಹಾಸಿಕ ಚಿತ್ರದುರ್ಗದ ಕೋಟೆಯನ್ನು ನಾಡಿನಾದ್ಯಂತ ಪರಿಚಯಿಸಿರುವ ಒನಕೆ ಓಬವ್ವಳ ಜಯಂತಿಯನ್ನು ಸರ್ಕಾರದ ಜೊತೆ ನಾವುಗಳು ಕೈಜೋಡಿಸಿ ಆಚರಿಸಬೇಕಾಗಿರುವುದರಿಂದ ಛಲವಾದಿ ಜನಾಂಗದವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಜಯಂತಿಯನ್ನು ಯಶಸ್ವಿಗೊಳಿಸುಬೇಕು. ಜಯಂತಿಗೆ ಸಂಬಂಧಿಸಿದಂತೆ ನ.3 ರಂದು ಮತ್ತೊಮ್ಮೆ ನಡೆಯುವ ಪೂವಭಾವಿ ಸಭೆಗೆ ಛಲವಾದಿ ಸಮುದಾಯದವರು ಆಗಮಿಸಿ ಸೂಕ್ತ ಸಲಹೆಗಳನ್ನು ನೀಡುವಂತೆ ಮನವಿ ಮಾಡಿದರು. ಡಾ.ಪಿ.ವಿ.ಶ್ರೀಧರಮೂರ್ತಿ ಮಾತನಾಡುತ್ತ ವೀರವನಿತೆ ಒನಕೆ ಓಬವ್ವ ಜಯಂತಿಯನ್ನು ವಿಜೃಂಭಣೆಯಿಂದ ಆಚರಿಸೋಣ. ಜನಾಂಗದ ಎಲ್ಲರ ಸಹಕಾರ ಅತಿ ಮುಖ್ಯ ಎಂದು ಕೋರಿದರು.



ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕ ಮಂಜುನಾಥ್ ಮಾತನಾಡುತ್ತ ಛಲವಾದಿ ಸಮುದಾಯದವರಲ್ಲಿ ಜಾಗೃತಿ ಮೂಡಿಸಬೇಕಾಗಿರುವುದರಿಂದ ಒನಕೆ ಓಬವ್ವಳ ಜಯಂತಿ ಮೂಲಕವಾದರೂ ಎಲ್ಲರೂ ಒಂದೆಡೆ ಸೇರೋಣ. ಮುಂದಿನ ಪೀಳಿಗೆಗೆ ಓಬವ್ವಳ ಸಾಹಸವನ್ನು ತಿಳಿಸುವುದರ ಜೊತೆಗೆ ಪರಂಪರೆಯನ್ನು ಮುಂದುವರೆಸಿಕೊಂಡು ಹೋಗಬೇಕಿದೆ. ಎಸ್.ಎಸ್.ಎಲ್.ಸಿ. ಹಾಗೂ ದ್ವಿತೀಯ ಪಿ.ಯು.ಸಿ.ಯಲ್ಲಿ ಅತಿ ಹೆಚ್ಚಿನ ಅಂಕಗಳನ್ನು ಗಳಿಸಿರುವ ಪ್ರತಿಭಾವಂತ ಮಕ್ಕಳನ್ನು ಗುರುತಿಸಿ ಪ್ರೋತ್ಸಾಹಿಸಿದರೆ

ಜನಾಂಗದ ಇತರೆ ಮಕ್ಕಳನ್ನು ಉತ್ತೇಜಿಸಿದಂತಾಗುತ್ತದೆ. ಹೋರಾಟ, ಸಂಘಟನೆ ಮೂಲಕ ಸರ್ಕಾರದಿಂದ ಸಿಗುವ ಸೌಲತ್ತುಗಳನ್ನು ಪಡೆದುಕೊಂಡು ಮಕ್ಕಳನ್ನು ವಿದ್ಯಾವವಂತರನ್ನಾಗಿ ಮಾಡಬೇಕಿದೆ ಎಂದು ತಿಳಿಸಿದರು.

ಶಾರದಾ ಬ್ರಾಸ್‌ಬ್ಯಾಂಡ್‌ನ ಗುರುಮೂರ್ತಿ ಮಾತನಾಡಿ ಒನಕೆ ಓಬವ್ವ ಜಯಂತಿಯಂದು ನಿಗಧಿತ ಸಮಯಕ್ಕೆ ಸರಿಯಾಗಿ ಮೆರವಣಿಗೆ ಹೊರಡಬೇಕು. ಅದಕ್ಕಾಗಿ ಸಮುದಾಯದ ಎಲ್ಲರೂ ಸಮಯಕ್ಕೆ ಸರಿಯಾಗಿ ಆಗಮಿಸಿದರೆ ಒಳ್ಳೆಯದು. ಜನಾಂಗದ ಪ್ರತಿಭಾವಂತ ಮಕ್ಕಳನ್ನು ಗುರುತಿಸಿ ಜಯಂತಿಯಲ್ಲಿ ಪ್ರೋತ್ಸಾಹಿಸಿದರೆ ಅದಕ್ಕೆ ಬೇಕಾದ ಎಲ್ಲಾ ರೀತಿಯ ನೆರವು ನೀಡುತ್ತೇನೆ. ಹೊಳಲ್ಕೆರೆ ರಸ್ತೆಯಲ್ಲಿರುವ ಗೌರಸಮುದ್ರ ಮಾರಮ್ಮನ ದೇವಸ್ಥಾನದ ಸಮೀಪದಿಂದ ಮೆರವಣಿಗೆ ಹೊರಡೋಣ ಎಂದು ಸಲಹೆ ನೀಡಿದರು.

### ಹಿರಿಯ ನಾಗರೀಕರಿಗೆ ಗೌರವ ಕೊಡುವುದು ಎಲ್ಲರ ಕರ್ತವ್ಯ: ನ್ಯಾಯಾಧೀಶೆ ಎಚ್.ಆರ್.ಹೇಮಾ



» ಮೊದಲ ಪುಟದಿಂದ

ಪ್ರಾಸ್ತಾವಿಕವಾಗಿ ಮಾತನಾಡಿದ ತಳಕು ನಾಡಕಚೇರಿ ಉಪತಹಶೀಲ್ದಾರ್ ಮಹಮ್ಮದ್‌ರಫೀ ಪ್ರತಿವರ್ಷ ಕಂದಾಯ ಇಲಾಖೆಇಂತಹ ಕಾರ್ಯಕ್ರಮಗಳ ಮೂಲಕ ಸರ್ಕಾರದಿಂದ ಮಂಜೂರಾದ ವಿವಿಧ ಯೋಜನೆಗಳ ಆದೇಶ ಪ್ರತಿಯನ್ನು ವಿತರಣೆ ಮಾಡಲಾಗುತ್ತಿದೆ. ಹಿರಿಯರ ಸೇವೆಯ ಬಗ್ಗೆ ಕಂದಾಯ ಇಲಾಖೆಗೆ ಅಪಾರವಾದ ಗೌರವವಿದೆ ಎಂದರು.

ಕಾರ್ಯಕ್ರಮದಲ್ಲಿ ತಾಲ್ಲೂಕು ವಕೀಲರ ಸಂಘದ ಅಧ್ಯಕ್ಷ ಕೆ.ಎಂ.ನಾಗರಾಜು, ಉಪಾಧ್ಯಕ್ಷ ಬಿ.ಪಾಲಯ್ಯ, ಪ್ರಧಾನ ಕಾರ್ಯದರ್ಶಿ ಎಂ.ಸಿದ್ದರಾಜು, ಖಜಾಂಚಿ ಟಿ.ರುದ್ರಯ್ಯ, ಮಧುಮತಿ, ಗಿರೀಶ್ ನಾಯಕನಹಟ್ಟಿ ನಾಡಕಚೇರಿ ಉಪತಹಶೀಲ್ದಾರ್ ಶಕುಂತಲ, ಪರಶುರಾಮಪುರ ನಾಡಕಚೇರಿ ಉಪತಹಶೀಲ್ದಾರ್ ಅನ್ನಪೂರ್ಣಮ್ಮ ಮುಂತಾದವರು ಉಪಸ್ಥಿತರಿದ್ದರು.

**ಪ್ರಮುಖ ಸುದ್ದಿ**

# ದೃಶ್ಯಕಲಾ ಕಾಲೇಜಿನಿಂದ ಚಿತ್ರಕಲಾ ಸ್ಪರ್ಧೆ

» ದಾವಣಗೆರೆ

ಯೂನಿವರ್ಸಿಟಿಕಾಲೇಜ್‌ಅಫ್‌ವಿಜುವಲ್ ಆರ್ಟ್ಸ್ ಅಲುಮ್ನಿ ಅಸೋಸಿಯೇಷನ್ (ರಿ) ವತಿಯಿಂದ ವಿಶ್ವವಿದ್ಯಾನಿಲಯ ದೃಶ್ಯಕಲಾ ಮಹಾವಿದ್ಯಾಲಯದ 60 ವರ್ಷಗಳ ವಜ್ರಮಹೋತ್ಸವ ಸಂಭ್ರಮ ಪ್ರಯುಕ್ತಚಿತ್ರಕಲಾ ಸ್ಪರ್ಧೆ ಹಾಗೂ ಯುಕೊವಾ ಕಲಾವಿದರಿಂದ ಮಕ್ಕಳಿಗೆ ಪ್ರಾತ್ಯಕ್ಷತೆಯನ್ನು ತಾಲ್ಲೂಕಿನ ಅಣಬೇರು ಗ್ರಾಮದ ಕನಕ ಸೆಂಟ್ರಲ್ ಸ್ಕೂಲ್ ಆವರಣದಲ್ಲಿ ಹಮ್ಮಿಕೊಳ್ಳಲಾಗಿತ್ತು ಕಾರ್ಯಕ್ರಮದ ಉದ್ಘಾಟನೆಯನ್ನು ವಿಶ್ವವಿದ್ಯಾನಿಲಯ ದೃಶ್ಯಕಲಾ ಮಹಾವಿದ್ಯಾಲಯದ ಪ್ರಾಚಾರ್ಯರಾದ ಡಾ. ಜೈರಾಜ್ ಚಿಕ್ಕಪಾಟೀಲ್ ನೆರವೇರಿಸಿದರು.

ನಂತರ ಮಾತನಾಡಿದ ಅವರು ಶಾಲೆಯ ಮಕ್ಕಳ ಪ್ರತಿಭೆಯ ಬಗ್ಗೆ ವರ್ಣನೆ ಮಾಡುವುದರ ಮುಖಾಂತರ ಮತ್ತು ಇಂತಹ ಕಾರ್ಯಕ್ರಮಕ್ಕೆ ಶಾಲೆಯ ಪ್ರೋತ್ಸಾಹಿಸಿದ ಆಡಳಿತ ಮಂಡಳಿ ಮತ್ತು ಶಿಕ್ಷಕ ವೃಂದಕ್ಕೆ ಪ್ರಶಂಸೆಯನ್ನು



ವ್ಯಕ್ತಪಡಿಸಿದರು. ಇಂತಹ ಚಟುವಟಿಕೆಗಳು ನಿರಂತರಶಾಲೆಗಳಲ್ಲಿಸಂಘಟಿಸುತ್ತಾ ಇದ್ದರೆ ಹಲವಾರು ಪ್ರತಿಭೆಗಳು ಇಂಥ ಕ್ಷೇತ್ರದಲ್ಲಿ ಸಾಧನೆ ಮಾಡಲು ಪ್ರೋತ್ಸಾಹಿಸಿದಂತೆ ಎಂದು ತಿಳಿಸಿದರು.

ಪ್ರಾಂಶುಪಾಲರಾದ ಮೊಹಮ್ಮದ್ ಇರ್‌ಫಾನ್ ಜಿ. ಎಸ್. ಕಾರ್ಯಕ್ರಮವನ್ನು ಶಾಲೆಯಲ್ಲಿ ನಡೆಸುತ್ತಿರುವ ಬಗ್ಗೆ ಮತ್ತು ಸಂಘಟಿಸಿದ ದೃಶ್ಯ ಕಲಾ ಕಾಲೇಜಿನ ಹಳೆಯ ವಿದ್ಯಾರ್ಥಿಗಳಿಗೆ ಎಲ್ಲರಿಗೂ ಅಭಿನಂದನೆಗಳನ್ನು ತಿಳಿಸಿದರು.ಈ ಸಂದರ್ಭದಲ್ಲಿಹಿರಿಯ ಚಿತ್ರಕಲಾವಿದರಾದ ಶ್ರೀನಾಥ್ ಬಿದ್ರೆ ಉಪಸ್ಥಿತರಿದ್ದರು.

ಅಧ್ಯಕ್ಷತೆ ವಹಿಸಿಕೊಂಡ ಕುಮಾರ್ ವೈ ಶಿಲ್ಪ ಕಲಾವಿದರು ಹಾಗೂ ಕರ್ನಾಟಕ ಶಿಲ್ಪಕಲಾ ಅಕಾಡೆಮಿ ಸದಸ್ಯರು ಕಾರ್ಯಕ್ರಮ ಉದ್ದೇಶಿಸಿ ಮಾತನಾಡುತ್ತಾ ಚಿತ್ರಕಲಾ ಕ್ಷೇತ್ರವನ್ನು ಬೆಳೆಸುವ ನಿಟ್ಟಿನಲ್ಲಿ ಕಾಲೇಜುಗಳಲ್ಲಿ ಹಳ್ಳಿ ಮತ್ತು ನಗರ ಪ್ರದೇಶಗಳಲ್ಲಿ ಈ ರೀತಿಯ ಹಲವಾರು ಕಾರ್ಯಕ್ರಮಗಳನ್ನು ಸಂಘಟಿಸುವ ಮೂಲಕ ಪ್ರಯತ್ನವನ್ನು ಮಾಡುತ್ತಿದ್ದೇವೆ. ನಮ್ಮ ದೃಶ್ಯ ಕಲಾ ಕಾಲೇಜು 60ನೇ ವರ್ಷದ ವಜ್ರ ಮಹೋತ್ಸವ ಕಾರ್ಯಕ್ರಮದ ಪ್ರಯುಕ್ತ ವಿಭಿನ್ನವಾದ ಚಟುವಟಿಕೆಗಳನ್ನು ಹಮ್ಮಿಕೊಳ್ಳುತ್ತ ಚಿತ್ರಕಲಾ ಕ್ಷೇತ್ರದ ಮಹತ್ವದ ಬಗ್ಗೆ ತಿಳಿಸುವ ಕೆಲಸವನ್ನು ಮಾಡುತ್ತಾ ಬರುತ್ತಿದ್ದೇವೆ ಎಂದು ಅವರು ತಿಳಿಸಿದರು. ಸಂತೋಷ್ ಕುಲಕರ್ಣಿ ಕನಕ ಸೆಂಟ್ರಲ್ ಸ್ಕೂಲ್ ಶಾಲೆಯ ವರ್ಣ ಚಿತ್ರವನ್ನು ಚಿತ್ರಿಸಿ ಶಾಲೆಗೆ ಕೊಡುಗೆ ಕೊಟ್ಟರು.

ಯುಕೊವಾ ಕಲಾವಿದರಾದ. ಚಂದ್ರಶೇಖರ್ ಎಸ್ ಸಂಗಾ, ಚಿತ್ರಕಲಾವಿದರು.ಸುಲಭ ಚಿತ್ರ ರಚನೆ ವಿಧಾನದಲ್ಲಿ ಮಕ್ಕಳಿಗೆ ಹಂತ ಹಂತವಾಗಿ ನೇರವಾಗಿ ಚಿತ್ರರಚನೆ ಮಾಡುವ ಮೂಲಕ ತೋರಿಸಿದರು. ಪ್ರಶಾಂತ ಎನ್., ಶಿಲ್ಪ ಕಲಾವಿದರು ಮಣ್ಣಿನಲ್ಲಿ ಮೂರ್ತಿ ರಚನೆಯನ್ನು ವಿವಿಧ ರೀತಿಯಲ್ಲಿ ತಯಾರಿಸಲು ಸರಳ ವಿಧಾನದಲ್ಲಿ ಮಕ್ಕಳಿಗೆ ತೋರಿಸುವ ಮೂಲಕ ಪ್ರಾತ್ಯಕ್ಷತೆ ನೀಡಿದರು. ನಂತರ ಎಲ್ಲಾ ವಿದ್ಯಾರ್ಥಿಗಳು ಚಿತ್ರಕಲಾ ಸ್ಪರ್ಧೆಯಲ್ಲಿ ಭಾಗವಹಿಸಿ ಚಿತ್ರ ರಚನೆಯನ್ನು ಮಾಡಿದರು ಕಾರ್ಯಕ್ರಮದ ನಿರೂಪಣೆಯನ್ನು ಶಾಲಾ ವಿದ್ಯಾರ್ಥಿಗಳು ನೆರವೇರಿಸಿಕೊಟ್ಟರು. ಕಾರ್ಯಕ್ರಮದಲ್ಲಿ ಶಾಲೆಯ ಎಲ್ಲ ವಿದ್ಯಾರ್ಥಿಗಳು ಮತ್ತು ಶಿಕ್ಷಕ ವೃಂದ, ದೃಶ್ಯ ಕಲಾ ಕಾಲೇಜಿನ ಯುಕೊವಾ ಕಲಾವಿದರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ವೈಭವಯುತವಾಗಿ ನಡೆದ ಕರಿಯಮ್ಮ, ಅಂತರಘಟ್ಟಮ್ಮ ದಸರಾ ಮಹೋತ್ಸವ



» **ಹೊಸದುರ್ಗ**

ಹೊಳಲ್ಕೆರೆ ತಾಲ್ಲೂಕಿನ ರಾಮಗಿರಿ ಹೋಬಳಿ ಹೊಸಹಟ್ಟಿಯಲ್ಲಿ ನೆಲೆಸಿರುವ ಶಕ್ತಿದೇವತೆ ಕರಿಯಮ್ಮ, ಅಂತರಘಟ್ಟಮ್ಮ ದೇವಿಯ ದಸರಾ ಮಹೋತ್ಸವ ಸಾವಿರಾರು ಭಕ್ತರ ಸಮ್ಮುಖದಲ್ಲಿ ಅತ್ಯಂತ ವಿಜೃಂಭಣೆಯಿಂದ ನಡೆಯಿತು. ಅಕ್ಟೋಬರ್ 10 ರಿಂದ ಆರಂಭವಾದ ದಸರಾ ಮುಳ್ಳು ಪವಾಡದ ಮೂಲಕ ಮುಕ್ತಾಯವಾಯಿತು. ಕಡವಿಗೆರೆ ವಜ್ಜೂರದಲ್ಲಿ ದೇವಿಗೆ ಗಂಗಾಪೂಜೆ ಮಾಡಲಾಯಿತು. ಮೂರು ದಿನ ನಂದಾದೀಪದಲ್ಲಿ ಪಟ್ಟದಲ್ಲಿ ಕೂರಿಸಲಾಯಿತು. ನಿತ್ಯ ಪಂಚಾಮೃತ ಅಭಿಷೇಕ, ನೈವೇದ್ಯ, ಮಹಾಮಂಗಳಾರತಿ ನಡೆಯಿತು. ದೇವಿಗೆ ವಿಶೇಷ ಅಲಂಕಾರ ಮಾಡಿದ್ದು, ಗ್ರಾಮದಲ್ಲಿ ಮೆರವಣಿಗೆ ಮೂಲಕ ಹೆಣ್ಣು ಮಕ್ಕಳ ಆರತಿಯ ಸಮ್ಮುಖದಲ್ಲಿ ಗಾಂಭೀರ್ಯದಿಂದ ಸಾಗಿತು. ಮುಳ್ಳು ಪವಾಡದ ಅಂಗವಾಗಿ ನಸುಕಿನಲ್ಲಿ ಬನ್ನಿ ಮುಡಿಯುವ ಮೂಲಕ ಅಂಬಿನೋತ್ಸವ ನಡೆಯಿತು. ನಂತರ ಸಾವಿರಾರು ಭಕ್ತರು ಸಮ್ಮುಖದಲ್ಲಿ ಮುಳ್ಳು ಪವಾಡ ಧಾರ್ಮಿಕ ವಿಧಿಗಳನ್ವಯ ನಡೆಯಿತು. ಆಕರ್ಷಕ ದೀಪಾಲಂಕಾರ, ಪುಷ್ಪಾಲಂಕಾರ ಭಕ್ತರ ಗಮನ ಸೆಳೆದಿದೆ. ದೇವಾಲಯದ ತುಂಬೆಲ್ಲಾ ಆಕರ್ಷಕ ಹೂವಿನ ಅಲಂಕಾರ ಮಾಡಲಾಗಿತ್ತು. ಭಕ್ತರ ಇಷ್ಟಾರ್ಥ ಪೂರೈಸುವ ದೇವಿಗೆ ಭಕ್ತರ ಸಂಖ್ಯೆ ಹೆಚ್ಚುತ್ತಲಿದೆ. ಗುಡಿಗೌಡರು, ದೇವಸ್ಥಾನದ ಸೇವಾ ಸಮಿತಿ, ಗಜಾನನ ಯುವಕರ ಬಳಗದವರು, ಹೊಸಹಟ್ಟಿ ಗ್ರಾಮಸ್ಥರು ಹಾಗೂ ಭಕ್ತರಿದ್ದರು.

### ಕಂಗುವಳ್ಳಿ ಆಯುರ್ವೇದ ಚಿಕಿತ್ಸಾಲಯಕ್ಕೆ ದೆಹಲಿಯ ಅಧಿಕಾರಿಗಳ ತಂಡ



» **ಹೊಸದುರ್ಗ**


ತಾಲೂಕಿನ ಕಂಗುವಳ್ಳಿಯ ಸರ್ಕಾರಿ ಆಯುರ್ವೇದ ಚಿಕಿತ್ಸಾಲಯಕ್ಕೆ ಪ್ರತಿಷ್ಠಿತ ಎನ್.ಎ.ಬಿ.ಹೆಚ್ ಸಂಸ್ಥೆ,ನವದೆಹಲಿಯ ಅಧಿಕಾರಿಗಳು ಭೇಟಿ ನೀಡಿ ದಾಖಲೆಗಳನ್ನು ಹಾಗೂ ಸಾರ್ವಜನಿಕರಿಗೆ ಸಿಗುವ ಸೇವೆಗಳ ಬಗ್ಗೆ ಪರಿಶೀಲನೆ ನಡೆಸಿದರು. ಎನ್.ಎ.ಬಿ.ಹೆಚ್ ಸಂಸ್ಥೆ ಒಂದು ಮೌಲ್ಯಮಾಪನ ಸಂಸ್ಥೆಯಾಗಿದ್ದು ಆಸ್ಪತ್ರೆಗಳ ಗುಣಮಟ್ಟ ಹಾಗೂ ಸೇವೆಗಳನ್ನು ಪರಿಶೀಲಿಸಿ ಪ್ರಮಾಣ ಪತ್ರವನ್ನು ನೀಡುವ ಸಂಸ್ಥೆಯಾಗಿದೆ. ಸಂಸ್ಥೆಯ ತಂಡದೊಂದಿಗೆ ಜಿಲ್ಲಾ ಆಯುಷ್ ಅಧಿಕಾರಿಗಳಾದ ಡಾ.ಚಂದ್ರಕಾಂತ್ ನಾಗಸಮುದ್ರ ನೋಡಲ್ ಅಧಿಕಾರಿಗಳಾದ ಡಾ. ಶಿವಕುಮಾರ್.ಟಿ ಅವರು ಹಾಜರಿದ್ದರು. ದೆಹಲಿಯಿಂದ ಬಂದಂತಹ ತಂಡವು ದಾಖಲೆಗಳನ್ನು ಪರಿಶೀಲಿಸಿ ಹಾಗೂ ಸಾರ್ವಜನಿಕರೊಂದಿಗೆ ಚರ್ಚಿಸಿ ಚಿಕಿತ್ಸಾಲಯದ ವತಿಯಿಂದ ನೀಡಲಾಗುವ ಸೌಲಭ್ಯಗಳು ಹಾಗೂ ದಾಖಲೆಗಳು ಉತ್ಕೃಷ್ಟವಾಗಿವೆ ಎಂದು ವೈದ್ಯಾಧಿಕಾರಿ ಡಾ:ನಧಾಫ್ ಹಾಗೂ ಸಿಬ್ಬಂಧಿಯವರನ್ನ ಶ್ಲಾಘಿಸಿದರು.




**ಹೊಸದುರ್ಗ ತಾಲೂಕಿನ ಬಲ್ಲಾಳ ಸಮುದ್ರ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಪ್ರಧಾನ ಮಂತ್ರಿ ಪೋಷಣ್ ಅಭಿಯಾನ ಕಾರ್ಯಕ್ರಮವನ್ನ ಆಯೋಜನೆ ಮಾಡಲಾಗಿತ್ತು, ಕಾರ್ಯಕ್ರಮದಲ್ಲಿ ಶಾಲಾಮಕ್ಕಳಿಗೆ ಪೋಷಕಾಂಶದ ಬಗ್ಗೆ ಅರಿವು ಮೂಡಿಸಲಾಯಿತು. ಕಾರ್ಯಕ್ರಮದಲ್ಲಿ ಶಿಕ್ಷಕರು ಮತ್ತು ಮಕ್ಕಳು ಭಾವಹಿಸಿದ್ದರು.**

**ಪ್ರಗತಿ ಪರಿಶೀಲನಾ ಸಭೆಯಲ್ಲಿ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿ ಅಧ್ಯಕ್ಷ ಪಿ.ಎಂ.ನರೇಂದ್ರ ಸ್ವಾಮಿ ಸೂಚನೆ**

# ತಳಸಮುದಾಯದ ಮಕ್ಕಳ ಶಿಕ್ಷಣಕ್ಕೆ ಒತ್ತು ನೀಡಿ




» **ಚಿತ್ರದುರ್ಗ**

ಜಿಲ್ಲೆಯಲ್ಲಿ ಶೇ.50ಕ್ಕೂ ಹೆಚ್ಚು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು ಗ್ರಾಮೀಣ ಭಾಗದ ಸರ್ಕಾರಿ ಶಾಲೆಗಳಲ್ಲಿ ವಿದ್ಯಾಭ್ಯಾಸ ಮಾಡಲಾಗುತ್ತಿದ್ದು, ತಳಸಮುದಾಯದ ಈ ಮಕ್ಕಳು ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ಹೆಚ್ಚಿನ ಹಣ ವ್ಯಯಿಸಿ ಶಿಕ್ಷಣ ಪಡೆಯಲು ಕಷ್ಟಸಾಧ್ಯ. ಹಾಗಾಗಿ ಈ ಮಕ್ಕಳ ಗುಣಮಟ್ಟದ ಶಿಕ್ಷಣಕ್ಕೆ ಒತ್ತು ನೀಡಬೇಕು ಎಂದು ಕರ್ನಾಟಕ ವಿಧಾನಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿ ಅಧ್ಯಕ್ಷ ಪಿ.ಎಂ. ನರೇಂದ್ರ ಸ್ವಾಮಿ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಶನಿವಾರ ಕರ್ನಾಟಕ ವಿಧಾನಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯಿಂದ ಏರ್ಪಡಿಸಿದ ಜಿಲ್ಲಾ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸರ್ಕಾರಿ ಯೋಜನೆಗಳನ್ನು ಪರಿಶಿಷ್ಟ ಸಮುದಾಯಕ್ಕೆ ತಲುಪಿಸುವಲ್ಲಿ ಇರುವ ನ್ಯೂನತೆಗಳು,ಅಡ್ಡಿಗಳನ್ನುನಿವಾರಿಸುವುದು, ಸಮರ್ಪಕ ಅನುಷ್ಠಾನ, ಹೊಸ ಯೋಜನೆಗಳ ಜಾರಿಗೆ ಸಂಬಂಧಿಸಿದಂತೆ ಪ.ಜಾತಿ ಮತ್ತು ಪ.ಪಂಗಡಗಳ ಕಲ್ಯಾಣ ಸಮಿತಿಯು ರಾಜ್ಯಾದ್ಯಂತ ಭೇಟಿ ನೀಡಿ, ಪರಿಶೀಲನೆ ನಡೆಸಿದ್ದು, ಸಮಿತಿಯು ವರದಿಯನ್ನು ಸಿದ್ಧಪಡಿಸಿ ಸರ್ಕಾರಕ್ಕೆ ಸಲ್ಲಿಸಲಿದೆ. ಅಸ್ಪೃಷ್ಯತೆ ನಿವಾರಣೆ, ಆರ್ಥಿಕ ಸಮಾನತೆ, ಗುಣಮಟ್ಟದ ಶಿಕ್ಷಣ ಇವು ತಳಸಮುದಾಯವನ್ನುಅಭಿವೃದ್ಧಿಪಡಿಸಲು ಅಗತ್ಯವಿರುವ ಪ್ರಮುಖ ಅಂಶಗಳಾಗಿದ್ದು, ತಾರತಮ್ಯದ ವ್ಯವಸ್ಥೆಯು ನಮ್ಮ ದೇಶದ ಭವಿಷ್ಯಕ್ಕೆ ಹಾಗೂ ಅಭಿವೃದ್ಧಿಗೆ ಮಾರಕವಾಗಬಾರದು ಎಂದರೆ, ಅಧಿಕಾರಿಗಳು ಜವಾಬ್ದಾರಿಯುತವಾಗಿ ಕೆಲಸ ಮಾಡಬೇಕು ಎಂದು ಕಲ್ಯಾಣ ಸಮಿತಿ ಅಧ್ಯಕ್ಷ ಪಿ.ಎಂ. ನರೇಂದ್ರಸ್ವಾಮಿ ಹೇಳಿದರು.

ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ದೊರೆಯದಿದ್ದರೆ ತಳ ಸಮುದಾಯ ಉನ್ನತ ಶಿಕ್ಷಣದಿಂದ ವಂಚಿತವಾಗಲಿದೆ. ಈ ಜನಾಂಗದವರಿಗೆ ಮೂಲಭೂತ ಶಿಕ್ಷಣ ಕೊಡದಿದ್ದಲ್ಲಿ, ಭವಿಷ್ಯದ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಈ ಸಮುದಾಯ ಉನ್ನತಿ ಸಾಧಿಸಲು ಸಾಧ್ಯವಾಗುವುದಿಲ್ಲ. ಉನ್ನತ ಹುದ್ದೆಗಳನ್ನು ಪಡೆಯಲು ಕೂಡ ಕಷ್ಟಕರವಾಗಲಿದೆ. ಬದಲಾದ ಸ್ಪರ್ಧಾತ್ಮಕ ವ್ಯವಸ್ಥೆಯಲ್ಲಿ ತಳಸಮುದಾಯದ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡಿ ಎಂದು ತಾಕೀತು ಮಾಡಿದರು.

ಸಿಎಸ್ಆರ್ ನಿಧಿಯಡಿಯಲ್ಲಿ ನನ್ನ ಕ್ಷೇತ್ರದಲ್ಲಿ ಕ್ಲಸ್ಟರ್‌ಗೊಂದು ಮಲ್ಟಿ ಮೀಡಿಯಾ ಸೆಂಟರ್ ಸ್ಥಾಪನೆ ಮಾಡಿ, ಅಕ್ಕಪಕ್ಕದ ಶಾಲೆಗಳನ್ನು ಸೇರಿಸಿಕೊಂಡು ಗುಣಮಟ್ಟದ ಶಿಕ್ಷಣಕ್ಕೆ ಅವಕಾಶ ನೀಡಲಾಗಿದೆ ಎಂದು ತಿಳಿಸಿದ ಅವರು, ಇಸ್ರೋ ಸಹಯೋಗದಲ್ಲಿ ಮಕ್ಕಳಿಗೆ ಉತ್ತಮ ಗುಣಮಟ್ಟದ ಶಿಕ್ಷಣ ದೊರೆಯುತ್ತಿದೆ, ಇದರ ಸದುಪಯೋಗಪಡಿಸಿಕೊಂಡು, ಉತ್ತಮ ಶಿಕ್ಷಣ ನೀಡಿ, ಪ್ರತಿ ಶಾಲೆಗೂ ಟ್ಯಾಬ್ ಕೊಡಿಸಿ, ಖಾಸಗಿ ಶಾಲೆಗಳಿಗಿಂತ ಉತ್ತಮ ಶಿಕ್ಷಣ ಕಲ್ಪಿಸಿಕೊಡಿ ಎಂದು ಹೇಳಿದರು.

ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ಎಸ್‌ಸಿ, ಎಸ್‌ಟಿ ವಿದ್ಯಾರ್ಥಿಗಳು ಶಾಲಾ ಹಾಗೂ ಪರೀಕ್ಷಾ ಶುಲ್ಕ ಪಾವತಿ ಮಾಡಿಲ್ಲ ಎಂದು ಪ್ರವೇಶ ನಿರಾಕರಿಸುವಂತಿಲ್ಲ. ಪರಿಶಿಷ್ಟ ಮಕ್ಕಳ ಶಾಲಾ ಶುಲ್ಕವನ್ನು ಸರ್ಕಾರವೇ ಪಾವತಿಸುತ್ತಿದೆ, ಇಂತಹ ಪ್ರಕರಣ ಕಂಡುಬಂದಲ್ಲಿ ತಕ್ಷಣ ಕ್ರಮಕೈಗೊಂಡು ದೂರು ದಾಖಲಿಸಬೇಕು ಎಂದು ಡಿಡಿಪಿಐ ಹಾಗೂ ಡಿಡಿಪಿಯು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಮಾತನಾಡಿ, ಡಿಎಂಎಫ್ ಹಾಗೂ ಕೆಎಂಇಆರ್‌ಸಿ ನಿಧಿಯಡಿ ಶಿಕ್ಷಣ ಮತ್ತು ಆರೋಗ್ಯಕ್ಕೆ ಹೆಚ್ಚಿನ ಒತ್ತು ನೀಡಲಾಗಿದ್ದು, ಶಾಲೆಗಳಲ್ಲಿ ಸ್ಮಾರ್ಟ್ ಕ್ಲಾಸ್ ಅಳವಡಿಕೆಗೆ ಕ್ರಮ ಕೈಗೊಳ್ಳಲಾಗಿದೆ. ಈಗಾಗಲೇ ಕೆಎಂಇಆರ್‌ಸಿ ಅನುದಾನದಲ್ಲಿ ಉತ್ತಮ ಸೌಲಭ್ಯ ಕಲ್ಪಿಸಲು ಪ್ರಸ್ತಾವನೆ ಸಿದ್ಧಪಡಿಸಿ ಅನುಮೋದನೆಗೆಸಲ್ಲಿಸಿದ್ದು,ಅನುಮೋದನೆ ಬಂದ ಬಳಿಕ ಅನುಷ್ಠಾನಕ್ಕೆ ಕ್ರಮ ವಹಿಸಲಾಗುವುದು ಎಂದರು.

ಜೆಜೆಎಂ ಕಾಮಗಾರಿ ತನಿಖಾ ವರದಿಗೆ ಸೂಚನೆ: 941 ಕೋಟಿ ರೂ. ವೆಚ್ಚದಲ್ಲಿ ಜಿಲ್ಲೆಯಲ್ಲಿ ಜೆಜೆಎಂ ಯೋಜನೆಯಡಿ ಸಮರ್ಪಕ ಕಾಮಗಾರಿಗಳು ನಡೆದಿಲ್ಲ, ರಸ್ತೆಗಳನ್ನು ಅಗೆದು, ಹಾಗೆಯೇ ಬಿಟ್ಟಿದ್ದಾರೆ, ಗುತ್ತಿಗೆದಾರರು ಅಧಿಕಾರಿಗಳನ್ನು ಬೆದರಿಸಿ, ಬಿಲ್ ಮಾಡಿಸಿಕೊಂಡಿದ್ದಾರೆ, ಅಂತಹವರ ಮೇಲೆ ಎಫ್ಐಆರ್ ದಾಖಲಿಸುವಂತೆ ಕಳೆದ ಕೆಡಿಪಿ ಸಭೆಯಲ್ಲಿ ತಿಳಿಸಲಾಗಿತ್ತು, ಆದರೆ ಈವರೆಗೂ ಏನೂ ಕ್ರಮ ಕೈಗೊಂಡಿಲ್ಲ ಎಂದು ಚಿತ್ರದುರ್ಗ ಶಾಸಕ ಕೆ.ಸಿ. ವೀರೇಂದ್ರ ಪಪ್ಪಿ ಹಾಗೂ ಹೊಳಲ್ಕೆರೆ ಶಾಸಕ ಡಾ. ಎಂ. ಚಂದ್ರಪ್ಪ ಅವರು ಸಭೆಯ ಗಮನಕ್ಕೆ ತಂದರು. ಇದಕ್ಕೆ ಪ್ರತಿಕ್ರಿಯಿಸಿದ ಸಮಿತಿಯ ಅಧ್ಯಕ್ಷರು, ಜಿಲ್ಲೆಯ ಗ್ರಾಮೀಣ ಭಾಗದ ಪ್ರತಿಯೊಂದು ಮನೆಗಳಿಗೂ ನಳ ಸಂಪರ್ಕದ ಮೂಲಕ ಕುಡಿಯುವ ನೀರು ಒದಗಿಸುವ ಜಲಜೀವನ್ ಮಿಷನ್ ಯೋಜನೆಯಡಿ ಜಿಲ್ಲೆಯಾದ್ಯಂತ ಕೈಗೊಂಡಿರುವ ಕುಡಿಯುವ ನೀರು ಕಾಮಗಾರಿಯ ತನಿಖಾ ವರದಿಯೊಂದಿಗೆ ಅಸಮರ್ಪಕ ಅನುಷ್ಠಾನಕ್ಕೆ ಕಾರಣವಾಗಿರುವ ಸಂಬಂಧಪಟ್ಟವರ ಮಾಹಿತಿಯನ್ನು 20 ದಿನಗಳ ಒಳಗಾಗಿ ಗ್ರಾಮೀಣ ಅಭಿವೃದ್ಧಿ ಇಲಾಖೆ ಹಾಗೂ ಕಲ್ಯಾಣ ಸಮಿತಿಗೆ ನೀಡಬೇಕು ಎಂದು ಸಮಿತಿ ಅಧ್ಯಕ್ಷ ಪಿ.ಎಂ.ನರೇಂದ್ರ ಸ್ವಾಮಿ ಅವರು ಜಿಲ್ಲಾಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಜೆಜೆಎಂ ಯೋಜನೆಯಡಿ ಪರಿಶಿಷ್ಟ ಜಾತಿ,ಪರಿಶಿಷ್ಟಪಂಗಡಗಳಜನವಸತಿಗಳಲ್ಲಿ ಕೈಗೊಂಡಿರುವ ಬಹುಗ್ರಾಮ ಕುಡಿಯುವ ನೀರಿನ ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಿಲ್ಲ. ಈ ಕುರಿತು ಸಂಬಂಧಪಟ್ಟ ಜನವಸತಿಗಳಿಗೆ ಸಮಾಜ ಕಲ್ಯಾಣಇಲಾಖೆಹಾಗೂಪರಿಶಿಷ್ಟವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿಗಳು ಭೇಟಿ ನೀಡಿ ಕಾಮಗಾರಿಗಳು ಸಮರ್ಪಕವಾಗಿ ಅನುಷ್ಠಾನ ಆಗುತ್ತಿರುವ ಕುರಿತು ವೀಕ್ಷಣೆ ಮಾಡಲಾಗಿದೆಯೇ? ಎಸ್‌ಸಿ, ಎಸ್‌ಟಿ ಜನಾಂಗಕ್ಕೆ ಯಾವ ಯಾವ ಇಲಾಖೆಗಳಲ್ಲಿ, ಯಾವ ಅನುದಾನದಲ್ಲಿ, ಯೋಜನೆಗಳನ್ನು ನೀಡಲಾಗುತ್ತಿದೆ ಎಂಬ ಕುರಿತು ಮೇಲ್ವಿಚಾರಣೆ, ಪರಿಶೀಲನೆ ನಡೆಸಲಾಗಿದೆಯೇ, ಇದು ನಿಮ್ಮ ಜವಾಬ್ದಾರಿ ಅಲ್ಲವೇ ಎಂದು ಪ್ರಶ್ನಿಸಿದ ಅವರು, ಪ್ರತಿ ತಾಲ್ಲೂಕುವಾರು ಎಸ್‌ಸಿ, ಎಸ್‌ಟಿ ಜನವಸತಿಗಳಲ್ಲಿ ಜೆಜೆಎಂನಡಿ ನಡೆದಿರುವ ಕಾಮಗಾರಿಗಳ ಬಗ್ಗೆ ಪರಿಶೀಲಿಸಿ ಫೋಟೋ, ವಿಡಿಯೋ ಸಹಿತ ವರದಿಯನ್ನು ಸಮಿತಿಗೆ ಸಲ್ಲಿಸಬೇಕು ಎಂದು ತಿಳಿಸಿದರು.

ಅಕ್ರಮ ಮದ್ಯ ಮಾರಾಟ ನಿಲ್ಲಿಸಿ: ಹಳ್ಳಿಗಳಲ್ಲಿ ಅಕ್ರಮ ಮದ್ಯ ಮಾರಾಟ ಹೆಚ್ಚು ನಡೆಯುತ್ತಿದೆ, ಪರಿಶಿಷ್ಟ ಜನಾಂಗದವರ ಮೇಲೆ ಹೆಚ್ಚು ದುಷ್ಪರಿಣಾಮ ಬೀರುತ್ತಿದೆ. ಯಾವುದೇ ಹಳ್ಳಿಗೆ ಹೋದರೂ, ಮಹಿಳೆಯರು ಅಕ್ರಮ ಮದ್ಯ ಮಾರಾಟ ನಿಲ್ಲಿಸಿ ಎಂದು ತಮ್ಮ ಅಳಲು ತೋಡಿಕೊಳ್ಳುತ್ತಾರೆ, ಈ ಬಗ್ಗೆ ಸೂಚನೆ ನೀಡಿದಾಗ್ಯೂ ಅಬಕಾರಿ ಇಲಾಖೆ ಗಂಭೀರವಾಗಿ ಪರಿಗಣಿಸಿಲ್ಲ ಎಂದು ಶಾಸಕ ವೀರೇಂದ್ರ ಪಪ್ಪಿ ಅವರು ಹೇಳಿದರು. ಇದಕ್ಕೆ ಸ್ಪಂದಿಸಿದ ನರೇಂದ್ರಸ್ವಾಮಿ ಅವರು, ಗ್ರಾಮೀಣ ಪ್ರದೇಶಗಳಲ್ಲಿ ನಡೆಯುವ ಅಕ್ರಮ ಮದ್ಯ ಮಾರಾಟಕ್ಕೆ ಕಡಿವಾಣ ಹಾಕಬೇಕು. ಪೊಲೀಸ್, ಅಬಕಾರಿ, ಕಂದಾಯ ಇಲಾಖೆಯ ಅಧಿಕಾರಿಗಳನ್ನು ಒಳಗೊಂಡ ತಾಲ್ಲೂಕುವಾರು ಟಾಸ್ಕ್‌ಫೋರ್ಸ್ ರಚಿಸಿಕೊಂಡು ಹಂತ ಹಂತವಾಗಿ ಅಕ್ರಮ ಮದ್ಯ ಮಾರಾಟ ನಿಲ್ಲಿಸಲು ಕ್ರಮವಹಿಸಬೇಕು ಎಂದು ಅಬಕಾರಿ ಅಧಿಕಾರಿಗಳಿಗೆ ಸೂಚಿಸಿದರು.

ಟೆಂಡರ್‌ಗಳಲ್ಲಿ ಶೇ.24.1 ರಷ್ಟು ಮೀಸಲಾತಿ ನೀಡಲು ಸೂಚನೆ: ರೂ.1 ಕೋಟಿವರೆಗಿನ ಸರ್ಕಾರಿ ಕಾಮಗಾರಿ ಟೆಂಡರ್‌ಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ರಾಜ್ಯ ಸರ್ಕಾರ ಶೇ.24.1 ರಷ್ಟು ಮೀಸಲಾತಿ ನೀಡಿದೆ. ಆದರೆ ಅಧಿಕಾರಿಗಳು ಪ್ಯಾಕೇಜ್ ರೂಪದಲ್ಲಿ ಕಾಮಗಾರಿ ಮತ್ತು ಸೇವಾ ಟೆಂಡರ್ ಕರೆದು, ಎಸ್.ಸಿ. ಹಾಗೂ ಎಸ್.ಟಿ ಜನರಿಗೆ ಅನ್ಯಾಯ ಮಾಡುತ್ತಿದ್ದಾರೆ. ಜಿಲ್ಲಾಧಿಕಾರಿಗಳು ಎಲ್ಲಾ ಇಲಾಖೆಗಳ ಟೆಂಡರ್‌ಗಳನ್ನು ಪರಿಶೀಲನೆ ನಡೆಸಿ, ನಿಯಮಬಾಹಿರವಾಗಿ ಟೆಂಡರ್ ಕರೆದಿದ್ದರೆ ಅವುಗಳನ್ನು ರದ್ದುಗೊಳಿಸಬೇಕು. ನಿಯಮಾನುಸಾರ ಎಸ್.ಸಿ ಹಾಗೂ ಎಸ್.ಟಿ ಗುತ್ತಿಗೆದಾರರಿಗೆ ಟೆಂಡರ್‌ಗಳಲ್ಲಿ ಮೀಸಲು ಒದಗಿಸಲು ಕ್ರಮ ಕೈಗೊಳ್ಳಬೇಕು ಎಂದು ಕಲ್ಯಾಣ ಸಮಿತಿ ಅಧ್ಯಕ್ಷ ಪಿ.ಎಂ.ನರೇಂದ್ರಸ್ವಾಮಿ ಸೂಚಿಸಿದರು.

ಮೀನುಗಾರಿಕೆ ಸಹಕಾರಿ ಸಂಘಗಳ ನಿರ್ಮಿಸಿ: ಮೀನುಗಾರಿಕೆ ಇಲಾಖೆಯಿಂದ ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಸದಸ್ಯರ ಮೀನುಗಾರಿಕೆ ಸಹಕಾರಿ ಸಂಘಗಳನ್ನು ನಿರ್ಮಿಸಬೇಕು. ಈ ಸಂಘಗಳ ಸದಸ್ಯರ ಜಾತಿ ಪ್ರಮಾಣ ಪತ್ರದ ಸಿಂಧುತ್ವವನ್ನು ಸಮಾಜ ಕಲ್ಯಾಣ ಹಾಗೂ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯಿಂದ ಪಡೆದುಕೊಳ್ಳಬೇಕು. ಜಿಲ್ಲೆಯ ಕೆರೆಗಳಲ್ಲಿ ಶೇ.24 ರಷ್ಟು ಕೆರೆಗಳನ್ನು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಮೀಸಲು ಇರಿಸಲು ಮೀನುಗಾರಿಕೆ ಇಲಾಖೆ ಉಪನಿರ್ದೇಶಕರಿಗೆ ಸಭೆಯಲ್ಲಿ ಸೂಚಿಸಲಾಯಿತು.

ಮಾಜಿ ದೇವದಾಸಿಯರಿಗೆ ನಿವೇಶನ ಹಾಗೂ ಜಮೀನು ನೀಡಿ: ಜಿಲ್ಲೆಯಲ್ಲಿ ದೇವದಾಸಿ ಪುನರ್ವಸತಿ ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಬೇಕು. ಇವರಿಗೆ ನಿವೇಶನ, ವಸತಿ ಹಾಗೂ ಜಮೀನು ನೀಡಲು 2009 ರಲ್ಲೇ ಸರ್ಕಾರದಿಂದ ಸುತ್ತೋಲೆ ಹೊರಡಿಸಲಾಗಿದೆ. ಸರ್ಕಾರಿ ಜಮೀನು ಲಭ್ಯವಿಲ್ಲದಿದ್ದರೆ, ಖಾಸಗಿ ಜಮೀನು ಖರೀದಿಸಿ ಜಮೀನು ಮಂಜೂರು ಮಾಡಬೇಕು ಎಂದು ಕಲ್ಯಾಣ ಸಮಿತಿ ಅಧ್ಯಕ್ಷ ಪಿ.ಎಂ.ನರೇಂದ್ರಸ್ವಾಮಿ ಹೇಳಿದರು.

ಜಿಲ್ಲೆಯಲ್ಲಿ ಒಟ್ಟು 223 ಮಾಜಿ ದೇವದಾಸಿಯರು ಇದ್ದು, ಮಹಿಳಾ ಅಭಿವೃದ್ಧಿ ನಿಗಮದಿಂದ 99 ಹಾಗೂ ವಿವಿಧ ಇಲಾಖೆಗಳ ಯೋಜನಗಳಡಿ 89 ದೇವದಾಸಿಯರಿಗೆ ವಸತಿ ಸೌಲಭ್ಯ ಕಲ್ಪಿಸಲಾಗಿದೆ. 27 ದೇವದಾಸಿಯರಿಗೆ ನಿವೇಶನದ ಕೊರತೆ ಇದ್ದು, ಶೀಘ್ರವೇ ನಿವೇಶನ ಮಂಜೂರು ಮಾಡಲು ಕ್ರಮ ಕೈಗೊಳ್ಳುವುದಾಗಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪನಿರ್ದೇಶಕಿ ಭಾರತಿ ಬಣಕಾರ್ ಸಭೆಯಲ್ಲಿ ಮಾಹಿತಿ ನೀಡಿದರು.ಸಮಿತಿ ಸದಸ್ಯೆ ಹೇಮಲತಾ ನಾಯಕ್ ಮಾತನಾಡಿ, 3 ರಿಂದ 6 ವರ್ಷದ ಒಳಗಿನ ಮಕ್ಕಳಿಗೆ ಸರ್ಕಾರದಿಂದ ನೀಡುತ್ತಿರುವ ಪೂರಕ ಪೌಷ್ಠಿಕ ಆಹಾರಗಳು ಕಳಪೆಯಾಗಿವೆ ಎಂದು ಸಾರ್ವಜನಿಕರಿಂದ ದೂರು ಕೇಳಿ ಬಂದಿವೆ. ಪುಷ್ಠಿ ಎಂಬ ಪೌಷ್ಟಿಕ ಪೌಂಡರ್‌ಗಳನ್ನು ನೀರಿನಲ್ಲಿ ಕಲಿಸಿ ಮಕ್ಕಳಿಗೆ ನೀಡಲಾಗುತ್ತಿದೆ. ಆದರೆ ಮಕ್ಕಳು ಇವುಗಳನ್ನು ಸೇವನೆ ಮಾಡುತ್ತಿಲ್ಲ. ಇದರ ಬದಲಿಗೆಜನರು ಈ ಪುಷ್ಠಿ ಪೌಂಡರ್‌ಗಳನ್ನು ಜಾನುವಾರುಗಳಿಗೆ ನೀಡುತ್ತಿರುವ ಕುರಿತು ವಿಡಿಯೋ ತುಣುಕುಗಳನ್ನು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿವೆ. ಸರಬರಾಜಾದ ಬೆಲ್ಲವೂ ಕೂಡ ಕಳಪೆಯಾಗಿದ್ದು, ಕಪ್ಪು ಬಣ್ಣದಿಂದ ಕೂಡಿದೆ. ಉಪನಿರ್ದೇಶಕರು ಸರಬರಾಜು ಆಗುವ ಪೌಷ್ಠಿಕ ಆಹಾರ ಗುಣಮಟ್ಟ ಪರಿಶೀಲಿಸಿ ಸರ್ಕಾರಕ್ಕೆ ಸೂಕ್ತ ವರದಿ ನೀಡುವಂತೆ ಅವರು ಹೇಳಿದರು.

ಪಿ.ಟಿ.ಸಿ.ಎಲ್ ಪ್ರಕರಣಗಳ ಇತ್ಯರ್ಥಕ್ಕೆ ಸೂಚನೆ : ಜಿಲ್ಲಾಧಿಕಾರಿ ಹಾಗೂ ಉಪವಿಭಾಗಾಧಿಕಾರಿಗಳ ನ್ಯಾಯಾಲಯಗಳಲ್ಲಿ ಬಾಕಿ ಇರುವ ಪಿ.ಟಿ.ಸಿ.ಎಲ್ ಪ್ರಕರಣಗಳ ಶೀಘ್ರವೇ ಇತ್ಯರ್ಥಗೊಳಿಸಬೇಕು. ನಮೂನೆ 50, 53 ಹಾಗೂ 57ರಡಿ ಭೂಮಿ ಮಂಜೂರಾತಿಗೆ ಸಲ್ಲಿಸಿರುವ ಅರ್ಜಿಗಳನ್ನು ಗೋಮಾಳ ಹಾಗೂ ಜಾನುವಾರು ಸಂಖ್ಯೆಗಳಿಗೆ ಹುಲ್ಲುಗಾವಲು ಮೀಸಲು ಇರಿಸುವ ದೃಷ್ಟಿಯಿಂದ ತಿರಸ್ಕರಿಸುವ ಮುನ್ನ ಶಾಸಕರ ನೇತೃತ್ವದ ಬಗರ್ ಹುಕುಂ ಸಮಿತಿ ಮುಂದೆ ಮಂಡಿಸಬೇಕು. ಈಗಾಗಲೇ ತಿರಸ್ಕೃತವಾದ ಅರ್ಜಿಗಳನ್ನು ಇದೇ ಅಕ್ಟೋಬರ್ 25 ರಿಂದ ಪ್ರಾರಂಭವಾಗಲಿರುವ ಜಾನುವಾರು ಗಣತಿ ಆಧರಿಸಿ, ಜಾನುವಾರುಗಳ ಸಂಖ್ಯೆಗೆ ಅನುಗುಣವಾಗಿ ಗೋಮಾಳ ಹಾಗೂ ಹುಲ್ಲುಗಾವಲು ಪ್ರದೇಶಗಳನ್ನು ನಿರ್ಧರಿಸಬೇಕು. ಒಂದು ವೇಳೆ ಜಾನುವಾರುಗಳ ಸಂಖ್ಯೆ ಕಡಿಮೆ ಇದ್ದು, ಹೆಚ್ಚುವರಿ ಭೂಮಿ ನಿಗದಿಯಾಗಿದ್ದರೆ, ಈ ಭೂಮಿಗಾಗಿ ಬಗರ್ ಹುಕುಂ ಅಡಿ ಅರ್ಜಿ ಸಲ್ಲಿಸಿದವರ ಅರ್ಜಿಯನ್ನು ಪುನರ್ ಪರಿಗಣನೆಗೆ ತೆಗೆದುಕೊಂಡು, ಶಾಸಕರ ನೇತೃತ್ವದ ಬಗರ್ ಹುಕುಂ ಸಮಿತಿಯಲ್ಲಿ ಮಂಡಿಸಬೇಕು. ಪ.ಜಾತಿ ಮತ್ತು ಪ.ಪಂಗಡದವರಿಗೆ ಸ್ಮಶಾನ ಭೂಮಿಯ ಕೊರತೆ ಇದ್ದಲ್ಲಿ, ಸರ್ಕಾರದಿಂದಲೇ ಭೂಮಿ ಖರೀದಿಸಿ ಸ್ಮಶಾನಕ್ಕೆ ಸ್ಥಳ ಮಂಜೂರು ಮಾಡಿಕೊಡಬೇಕು ಎಂದು ಜಿಲ್ಲಾಧಿಕಾರಿಗಳಿಗೆ ಕಲ್ಯಾಣ ಸಮಿತಿ ಅಧ್ಯಕ್ಷ ಪಿ.ಎಂ.ನರೇಂದ್ರಸ್ವಾಮಿ ಹೇಳಿದರು.

ಜಾತಿ ನಿಂದನೆ ಪ್ರಾಥಮಿಕ ತನಿಖೆ ಕಡ್ಡಾಯ: ಜಾತಿ ನಿಂದನೆ ಪ್ರಕರಣಗಳಲ್ಲಿ ಪ್ರಾಥಮಿಕ ತನಿಖೆ ಮಾಡಿದ ಬಳಿಕವೇ ಪ್ರಕರಣದಲ್ಲಿ ಕ್ರಮಕೈಗೊಳ್ಳುವಂತೆ ಸುಪ್ರೀಂ ಕೋರ್ಟ್ ಸೂಚನೆ ನೀಡಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು ತಿಳಿಸಿದರು.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವ್ಯಕ್ತಿಗಳ ಮೇಲಿನ ದೌರ್ಜನ್ಯ ತಡೆ ಕಾಯ್ದೆಯಡಿಯ ಪ್ರಕರಣದಲ್ಲಿ ಕ್ರಮ ಕೈಗೊಳ್ಳುವ ಮೊದಲು ಪ್ರಕರಣದ ಬಗ್ಗೆ ಪೊಲೀಸ್ ಅಧಿಕಾರಿಗಳು ಪ್ರಾಥಮಿಕ ತನಿಖೆ ನಡೆಸಿ ಬಳಿಕವೇ ಸೂಕ್ತ ಕ್ರಮ ಕೈಗೊಳ್ಳುವುದು ಕಡ್ಡಾಯ ಎಂದು ನ್ಯಾಯಾಲಯ ನಿರ್ದೇಶನ ನೀಡಿದೆ ಎಂದು ತಿಳಿಸಿದ ಅವರು, ಎಸ್‌ಎಸಿ, ಎಸ್‌ಟಿ ದೌರ್ಜನ್ಯ ತಡೆ ಕಾಯ್ದೆ ದುರುಪಯೋಗ ಹೆಚ್ಚಾಗುತ್ತಿದೆ, ಹಾಗೂ ಜಾತಿ ನಿಂದನೆ ಪ್ರಕರಣಗಳಲ್ಲಿ ಸಾಬೀತು ಪ್ರಮಾಣ ಕಡಿಮೆ ಇದ್ದು, ಹೀಗಾಗಿ ಕ್ರಮಕ್ಕೂ ಮುನ್ನ ಪ್ರಾಥಮಿಕ ತನಿಖೆ ಕೈಗೊಳ್ಳುವಂತೆ ನಿರ್ದೇಶನವಿದೆ ಎಂದರು.

ಸಭೆಯಲ್ಲಿ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿ ಸದಸ್ಯರುಹಾಗೂಶಾಸಕರುಗಳಾದಡಾ.ಎಂ. ಚಂದ್ರಪ್ಪ, ದುರ್ಯೋದನ ಎಂ.ಐಹೊಳೆ, ಕೆ.ಕೃಷ್ಣಾನಾಯ್ಕ್, ಕೆ.ಸಿ.ವೀರೇಂದ್ರ ಪಪ್ಪಿ, ಹೇಮಲತಾ ನಾಯಕ್, ರಾಜೇಂದ್ರ ರಾಜಣ್ಣ, ಬಿ.ದೇವೇಂದ್ರಪ್ಪ ಹಾಗೂ ಕರ್ನಾಟಕ ವಿಧಾನಸಭೆ ಸಚಿವಾಲಯ ಅಧೀನ ಕಾರ್ಯದರ್ಶಿ ಪಿ.ಸೀನ, ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು, ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ ಸೇರಿದಂತೆ ವಿವಿಧ ಇಲಾಖೆಯ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಇದ್ದರು.

**ಪ್ರಮುಖ ಸುದ್ದಿ**

# ಈಡಿಗರ ಸಂಘದ ರಜತ ಮಹೋತ್ಸವ; ಪ್ರತಿಭಾ ಪುರಸ್ಕಾರ



» **ಚಿತ್ರದುರ್ಗ**

ಹಿಂದಿನಿಂದಲೂ ಈಡಿಗರ ಸಮುದಾಯದ ಜೊತೆ ನಮ್ಮ ಕುಟುಂಬ ಉತ್ತಮ ಬಾಂಧವ್ಯವಿಟ್ಟುಕೊಂಡಿದೆ. ನನ್ನ ಚಿಕ್ಕಪ್ಪ ಜಯಣ್ಣನವರನ್ನು ರಾಜಕೀಯಕ್ಕೆ ತಂದಿದ್ದು, ಈ ಜನಾಂಗ. ನಿಮ್ಮ ಬೆಂಬಲದಿಂದಲೇ ನಾನೂ ಕೂಡ ಈಗ ಮಂತ್ರಿಯಾಗಿದ್ದೇನೆಂದು ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಈಡಿಗರ ಜೊತೆಯಿರುವ ಅನ್ಯೋನ್ಯತೆಯನ್ನು ಮೆಲುಕು ಹಾಕಿದರು.

ತ.ರಾ.ಸು.ರಂಗಮಂದಿರದಲ್ಲಿ ಭಾನುವಾರ ನಡೆದ ಜಿಲ್ಲಾ ಆರ್ಯ ಈಡಿಗರ ಸಂಘದ ರಜತ ಮಹೋತ್ಸವ, ಬ್ರಹ್ಮಶ್ರೀ ನಾರಾಯಣ ಗುರುಗಳ 170 ನೇ ಜಯಂತಿ, ಪ್ರತಿಭಾ ಪುರಸ್ಕಾರ, ಸಾಧಕರಿಗೆ ಸನ್ಮಾನ ಹಾಗೂ ಜನಾಂಗದ ಬಡ ಮಹಿಳೆಯರ ಸ್ವಾವಲಂಬನೆಗೆ ಸಹಾಯ ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ದಿವಂಗತ ಡಿ.ದೇವರಾಜ ಅರಸು, ಹೆಚ್.ಆರ್.ಬಸವರಾಜಪ್ಪನವರಿಂದ ನಮ್ಮ ಕುಟುಂಬ ರಾಜಕೀಯ ಪ್ರವೇಶಿಸಿತು. ಮಾಜಿ ಮುಖ್ಯಮಂತ್ರಿ ಎಸ್.ಬಂಗಾರಪ್ಪ, ಆರ್.ಎಲ್.ಜಾಲಪ್ಪ ಇವರುಗಳು ಈಡಿಗ ಸಮುದಾಯದವರು. ಈಡಿಗರ ರಕ್ತದಲ್ಲಿಯೇ ಸಮಾಜಕ್ಕೆ ಸಹಾಯ ಮಾಡುವ ಶಕ್ತಿಯಿದೆ. ಚಳ್ಳಕೆರೆಯಲ್ಲಿ ನಾನು ಡಿಸ್ಟಿಲರಿ ಆರಂಭಿಸಿದಾಗ ಈಡಿಗರು ಸ್ಪಿರಿಟ್ ಪೂರೈಸುತ್ತಿದ್ದುದನ್ನು ನೆನಪಿಸಿಕೊಂಡರು.

ಚಿತ್ರದುರ್ಗದಲ್ಲಿ ಹಾಸ್ಟೆಲ್, ಸಮುದಾಯ ಭವನ ನಿರ್ಮಾಣಕ್ಕೆ ಬೇಡಿಕೆಯಿಟ್ಟಿದ್ದೀರ. ನಾನು ಮಂತ್ರಿಯಾಗಿ ಒಂದು ವರ್ಷ ನಾಲ್ಕು ತಿಂಗಳಾಗಿದೆ. ಇದುವರೆವಿಗೂ ನೀವುಗಳು ನನ್ನನ್ನು ಏನು ಕೇಳಿಲ್ಲ. ಹಿರಿಯೂರಿನವರು ಕೇಳಿದ್ದರಿಂದ ಅಲ್ಲಿಗೆ ಎರಡು ಕೋಟಿ ರೂ.ಗಳನ್ನು ನೀಡಿದ್ದೇನೆ. ಚಿತ್ರದುರ್ಗದಲ್ಲಿ ಎಲ್ಲಿಯಾದರೂ ಜಾಗ ಗುರುತಿಸಿ ಐದು ಎಕರೆ ಭೂಮಿ ಮಂಜೂರು ಮಾಡಿ ಅದಕ್ಕೆ ಬೇಕಾದ ಅನುದಾನವನ್ನು ಸರ್ಕಾರದಿಂದ ಕೊಡಿಸುತ್ತೇನೆಂದು ಡಿ.ಸುಧಾಕರ್ ಭರವಸೆ ನೀಡಿದರು.

ಶಿಕ್ಷಣದಿಂದ ಮಾತ್ರ ಉದ್ಧಾರವಾಗಲು ಸಾಧ್ಯ. ಅದಕ್ಕಾಗಿ ಮೊದಲು ಮಕ್ಕಳನ್ನು ಶಿಕ್ಷಣವಂತರನ್ನಾಗಿಸಿ. ಸಂಘಟಿತರಾಗಿ ಸರ್ಕಾರದಿಂದ ಸಿಗುವ ಸೌಲಭ್ಯಗಳನ್ನು ಪಡೆದುಕೊಳ್ಳುವಂತೆ ಈಡಿಗಸಮುದಾಯಕ್ಕೆ ಕರೆ ನೀಡಿದರು.

ಜಿಲ್ಲಾ ಆರ್ಯ ಈಡಿಗರ ಸಂಘದ ಜಿಲ್ಲಾಧ್ಯಕ್ಷ ಹೆಚ್.ಜೀವನ್ ಪ್ರಾಸ್ತಾವಿಕವಾಗಿ ಮಾತನಾಡಿ ಈಡಿಗರ ಜನಾಂಗದ ಮಕ್ಕಳ ಶಿಕ್ಷಣಕ್ಕೆ ಚಿತ್ರದುರ್ಗದಲ್ಲಿ ಹಾಸ್ಟೆಲ್, ಸಮುದಾಯ ಭವನ ನಿರ್ಮಾಣಕ್ಕೆ ಐದು ಎಕರೆ ಜಮೀನು ಮಂಜೂರು ಮಾಡುವಂತೆ ಜಿಲ್ಲಾ ಉಸ್ತುವಾರಿ ಸಚಿವರಿಗೆ ಮನವಿ ಮಾಡಿದರು. ಪ್ರತಿ ವರ್ಷವೂ ಇಂತಹ ಕಾರ್ಯಕ್ರಮ ನಡೆಸಿಕೊಂಡು ಬರುತ್ತಿದ್ದು, ಜನಾಂಗದ ಪ್ರತಿಭಾವಂತ ಮಕ್ಕಳನ್ನು ಗುರುತಿಸಿ ಸನ್ಮಾನಿಸಿ ಶಿಕ್ಷಣಕ್ಕೆ ಉತ್ತೇಜನ ಕೊಡುತ್ತಿದ್ದೇವಲ್ಲದೆ ಸಾಧಕರನ್ನು ಗುರುತಿಸಿ ಗೌರವಿಸುತ್ತಿದ್ದೇವೆಂದು ಹೇಳಿದರು.

ಆರ್ಯ ಈಡಿಗ ಮಹಾಸಂಸ್ಥಾನ ಸೋಲೂರು ಮಠದ ಪೀಠಾಧಿಪತಿ ವಿಖ್ಯಾತಾನಂದ ಸ್ವಾಮೀಜಿ, ನಾರಾಯಣ ಗುರು ಮಹಾಸಂಸ್ಥಾನ ಗರ್ತಿಕೆರೆ, ಅಮೃತ ತೀರ್ಥಹಳ್ಳಿ ತಾಲ್ಲೂಕಿನ ರೇಣುಕಾನಂದ ಸ್ವಾಮೀಜಿ ಇವರುಗಳು ಸಾನಿಧ್ಯ ವಹಿಸಿದ್ದರು.

ವಿಧಾನಪರಿಷತ್ ಸದಸ್ಯ ಬಿ.ಕೆ. ಹರಿಪ್ರಸಾದ್, ಕರ್ನಾಟಕ ಆರ್ಯ ಈಡಿಗರ ಸಂಘದ ರಾಜ್ಯಾಧ್ಯಕ್ಷ ಡಾ.ತಿಮ್ಮೇಗೌಡ, ಜೆ.ಪಿ.ಎನ್.ಪ್ರತಿಷ್ಠಾನ ಸಂಸ್ಥಾಪಕ ಅಧ್ಯಕ್ಷ ಜೆ.ಪಿ.ಸುಧಾಕರ್, ದಾವಣಗೆರೆ ಜಿಲ್ಲಾ ಆರ್ಯ ಈಡಿಗರ ಸಂಘದ ಅಧ್ಯಕ್ಷ ಹೆಚ್.ಶಂಕರ್, ಜಿಲ್ಲಾ ಆರ್ಯ ಈಡಿಗರ ಸಂಘದ ಮಹಿಳಾ ಅಧ್ಯಕ್ಷೆ ಶ್ರೀಮತಿ ಅನುರಾಧ

ರವಿಕುಮಾರ್, ಜಿಲ್ಲಾ ಆರ್ಯ ಈಡಿಗರ ಯುವ ವೇದಿಕೆ ಅಧ್ಯಕ್ಷ ಎಸ್. ವೆಂಕಟೇಶ್, ಸಂಘಟನಾ ಕಾರ್ಯದರ್ಶಿ ಜೆ.ಆರ್.ಅಜಯ್‌ಕುಮಾರ್, ಜಿಲ್ಲಾ ಸಂಘದ ಉಪಾಧ್ಯಕ್ಷ ಟಿ.ಸ್ವಾಮಿ ಸೇರಿದಂತೆ ಪದಾಧಿಕಾರಿಗಳು ವೇದಿಕೆಯಲ್ಲಿದ್ದರು.


Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T